ಸಂಪುಟ : 11 ಸಂಚಿಕೆ: 39 ಪುಟ : 4+2 ಬೆಲೆ: 3.00 ಗುರುವಾರ ಮಾರ್ಚ್ 12 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 39 Pages : 4+2 Price : 3.00 Thursday March 12 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಉತ್ತರ ದ್ವಾರ ಅಭಿವೃದ್ಧಿಗೆ ಪ್ರವಾಸೋದ್ಯಮ ಇಲಾಖೆಯಿಂದ 2.40 ಕೋಟಿ ಅನುದಾನ

# ಐತಿಹಾಸಿಕ ಪುಲಿಗೆರೆ ಸೋಮೇಶ್ವರ ದೇವಸ್ಥಾನಕ್ಕೆ ಹೊಸ ಮೆರುಗು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಿರುಳ್ಗನ್ನಡ ನಾಡಿನ ಐತಿಹಾಸಿಕ ಪ್ರಸಿದ್ಧ ಪುಲಿಗೆರೆಯ ಶ್ರೀ ಸೋಮೇಶ್ವರ ದೇವಸ್ಥಾನದ ಉತ್ತರ ದ್ವಾರದ ಅಭಿವೃದ್ಧಿಗಾಗಿ ಪ್ರವಾಸೋದ್ಯಮ ಇಲಾಖೆಯಿಂದ 2.40 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಮಾ.14ರಂದು ಕಾಮಗಾರಿಗೆ ಭೂಮಿಪೂಜೆ ನೆರವೇರಲಿದೆ. ಈ ಸುದ್ದಿ ಈ ಭಾಗದ ಭಕ್ತರು ಹಾಗೂ ಸಾರ್ವಜನಿಕರಲ್ಲಿ ಸಂತಸ ಮೂಡಿಸಿದೆ.

ಶಿಲ್ಪಕಲಾ ವೈಭವದೊಂದಿಗೆ ಶಿವ-ಪಾರ್ವತಿ ನಂದಿಯ ಮೇಲೆ ಕುಳಿತಿರುವ ಶ್ರೀ ಸೋಮೇಶ್ವರನ ಮೂರ್ತಿ ದೇವಸ್ಥಾನದ ಶ್ರೇಷ್ಠತೆಗೆ ಸಾಕ್ಷಿಯಾಗಿದೆ. ಹತ್ತಾರು ಎಕರೆ ವಿಸ್ತೀರ್ಣದ ಈ ದೇವಸ್ಥಾನವು ಹೊಯ್ಸಳ ವಾಸ್ತುಶಿಲ್ಪದಂತೆ ನಕ್ಷತ್ರಾಕಾರದಲ್ಲಿ ನಿರ್ಮಾಣಗೊಂಡಿದ್ದು, ಹೊರಭಾಗದಲ್ಲಿ ಅದ್ಭುತ ಶಿಲ್ಪಕಲಾಕೃತಿಗಳು ಆಕರ್ಷಕವಾಗಿವೆ.

ದೇವಾಲಯದ ಒಳಭಾಗದಲ್ಲಿ ಗರ್ಭಗೃಹ, ಅಂತರಾಳ, ನವರಂಗ ಹಾಗೂ 49 ವಿಶಿಷ್ಟ ಕಂಬಗಳ ರಂಗಮಂಟಪವಿದೆ. ಪೂರ್ವ, ದಕ್ಷಿಣ ಹಾಗೂ ಉತ್ತರ ದಿಕ್ಕುಗಳಲ್ಲಿ ವಿಶೇಷ ಶಿಲ್ಪಕಲೆಯಿಂದ ಅಲಂಕರಿಸಿದ ಮುಖ್ಯ ಪ್ರವೇಶ ದ್ವಾರಗಳಿವೆ. ದೇವಾಲಯದ ಪ್ರಾಂಗಣದಲ್ಲಿ ಕಲ್ಯಾಣಿ, ಲಜ್ಜಾಗೌರಿ ದೇವಸ್ಥಾನ ಸೇರಿದಂತೆ ಹಲವು ದೇವಮಂಟಪಗಳನ್ನು ಒಳಗೊಂಡ ದೇವಾಲಯಗಳ ಸಮುಚ್ಚಯವಿದೆ.

> “ಗದಗ ಜಿಲ್ಲೆಯ ಲಕ್ಕುಂಡಿ, ಡಂಬಳ, ಕಪ್ಪತ್ತಗುಡ್ಡ ಮತ್ತು ಗದಗದ ಐತಿಹಾಸಿಕ ಪ್ರಸಿದ್ಧ ದೇವಸ್ಥಾನಗಳಂತೆ ಪುರಾತತ್ವ ಇಲಾಖೆಯ ಅಧೀನದಲ್ಲಿರುವ ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ದೇವಸ್ಥಾನವೂ ಅತ್ಯಂತ ವಿಶೇಷವಾಗಿದೆ. ಈ ದೇವಸ್ಥಾನದ ಅಭಿವೃದ್ಧಿಗೆ ಅನುದಾನ ನೀಡಬೇಕು ಎಂಬುದು ಭಕ್ತರ ಬೇಡಿಕೆಯಾಗಿತ್ತು. ಇದೀಗ ಪ್ರವಾಸೋದ್ಯಮ ಇಲಾಖೆಯಿಂದ 2.40 ಕೋಟಿ ಅನುದಾನ ಬಿಡುಗಡೆಗೊಂಡಿದ್ದು, ಆರು ತಿಂಗಳೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ.”
>
> **– ಹೆಚ್.ಕೆ. ಪಾಟೀಲ,** ಪ್ರವಾಸೋದ್ಯಮ ಇಲಾಖೆ ಸಚಿವರು



ವೈಶಿಷ್ಟ್ಯಪೂರ್ಣ ಈ ದೇವಾಲಯವು ಸುಮಾರು 15 ವರ್ಷಗಳ ಹಿಂದೆ ಶಿಥಿಲಾವಸ್ಥೆಗೆ ತಲುಪಿದ್ದು ನಿರ್ಲಕ್ಷ್ಯಕ್ಕೊಳಗಾಗಿತ್ತು. ಈ ವೇಳೆ ಇನ್ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷೆ ಡಾ. ಸುಧಾ ನಾರಾಯಣ ಮೂರ್ತಿ ಅವರು 5 ಕೋಟಿ ವೆಚ್ಚದಲ್ಲಿ ದೇವಸ್ಥಾನವನ್ನು ಜೀರ್ಣೋದ್ಧಾರಗೊಳಿಸಿದರು. ಅಲ್ಲದೇ ಪ್ರತಿವರ್ಷ ಇನ್ಫೋಸಿಸ್ ಪ್ರತಿಷ್ಠಾನದಿಂದ ಮೂರು ದಿನಗಳ ಕಾಲ “ಪುಲಿಗೆರೆ ➤➤3ನೇ ಪುಟಕ್ಕೆ

> “ನಮ್ಮ ಊರಿನ ಆರಾಧ್ಯದೈವ ಸೋಮೇಶ್ವರ ದೇವಸ್ಥಾನವನ್ನು ಡಾ. ಸುಧಾ ಮೂರ್ತಿ ಅವರು 5 ಕೋಟಿ ವೆಚ್ಚದಲ್ಲಿ ಜೀರ್ಣೋದ್ಧಾರಗೊಳಿಸಿದ್ದಾರೆ. ಆದರೆ ಉತ್ತರ ದ್ವಾರದ ಅಭಿವೃದ್ಧಿ ನೆನೆಗುದಿಗೆ ಬಿದ್ದಿತ್ತು. ಹೆಚ್.ಕೆ. ಪಾಟೀಲರು ಪ್ರವಾಸೋದ್ಯಮ ಸಚಿವರಾಗುತ್ತಿದ್ದಂತೆಯೇ ದೇವಸ್ಥಾನದ ಅಭಿವೃದ್ಧಿಗೆ ಹೊಸ ಆಶಾಕಿರಣ ಮೂಡಿತು. ಇದೀಗ ಅವರ ಇಚ್ಛಾಶಕ್ತಿಯಿಂದ 2.40 ಕೋಟಿ ಅನುದಾನ ಬಿಡುಗಡೆಯಾಗಿ ಕಾಮಗಾರಿ ಆರಂಭಗೊಳ್ಳುತ್ತಿರುವುದು ಭಕ್ತರಲ್ಲಿ ಸಂತಸ ತಂದಿದೆ.”
>
> **– ಚನ್ನಪ್ಪ ಜಗಲಿ,** ಶ್ರೀ ಸೋಮೇಶ್ವರ ದೇವಸ್ಥಾನ ಭಕ್ತರ ಸಮಿತಿ ಖಜಾಂಚಿ.

> “ಲಕ್ಷ್ಮೇಶ್ವರದ ಸೋಮೇಶ್ವರ ದೇವಸ್ಥಾನ ಅತ್ಯಂತ ಪುರಾತನ ಹಾಗೂ ಶಿಲ್ಪಕಲೆಯ ವೈಶಿಷ್ಟ್ಯಪೂರ್ಣ ದೇವಾಲಯವಾಗಿದೆ. ಈ ಹಿನ್ನೆಲೆ ಶಿಥಿಲಾವಸ್ಥೆಗೊಂಡಿದ್ದ ಉತ್ತರ ದ್ವಾರದ ಅಭಿವೃದ್ಧಿಗಾಗಿ 2.40 ಕೋಟಿ ಅನುದಾನ ಬಿಡುಗಡೆಗೊಳಿಸಲಾಗಿದೆ. ಮೊದಲ ಹಂತದಲ್ಲಿ 78 ಲಕ್ಷ ಅನುದಾನ ಬಿಡುಗಡೆಯಾಗಿದ್ದು, ಇದೇ ಶನಿವಾರ ಸಚಿವರು ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಿದ್ದಾರೆ. ಕಾಮಗಾರಿ ಪೂರ್ಣಗೊಂಡು ಒಂದು ವರ್ಷದೊಳಗೆ ಲೋಕಾರ್ಪಣೆಗೊಳ್ಳಲಿದೆ.”

# ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ವಿಂಡ್ ಫ್ಯಾನ್ ಅಳವಡಿಕೆ ಆರೋಪ: ರೈತರ ಪ್ರತಿಭಟನೆ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಸಮೀಪದ ಯಲಿಶಿರೂರು ಗ್ರಾಪಂ ವ್ಯಾಪ್ತಿಯ ಇನಾಂ ವೆಂಕಟಾಪುರ ದೇವಸ್ಥಾನಕ್ಕೆ ತೆರಳುವ ರಸ್ತೆ ಪಕ್ಕದ ಗುಡ್ಡದ ಪ್ರದೇಶದಲ್ಲಿ ಬೋರೂಕಾ ಕಂಪನಿಯ ಪವನ ವಿದ್ಯುತ್ ಘಟಕ ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಕಾನೂನು ಉಲ್ಲಂಘಿಸಿ ಫ್ಯಾನ್‌ಗಳನ್ನು ಅಳವಡಿಸುತ್ತಿದೆ ಎಂದು ಆರೋಪಿಸಿ ರೈತರು ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಸೊರಟೂರು ಗ್ರಾಮದ ರೈತ ರಮೇಶ ಓಂಕಾರಿ, ಯಲಿಶಿರೂರು ಗ್ರಾಮದ ಹದ್ದಿನಲ್ಲಿರುವ ರಿ.ಸ.ನಂ. 34/1 ರ 173 ಎಕರೆ 17 ಗುಂಟೆ ಪ್ರದೇಶ ಕಾಯ್ದಿಟ್ಟ ಅರಣ್ಯವಾಗಿದ್ದು, ಇದರ ಪೂರ್ವ ದಿಕ್ಕಿನಲ್ಲಿ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ರಿ.ಸ.ನಂ. 34/2 ರ 118 ಎಕರೆ ಜಮೀನು ಇದೆ. ಈ ಎರಡು ಆಸ್ತಿಗಳು ಸಾರ್ವಜನಿಕ ಆಸ್ತಿಗಳಾಗಿದ್ದು ದೇವಸ್ಥಾನದ ಅಭಿವೃದ್ಧಿಗೆ ಬಳಸಬೇಕಾಗಿತ್ತು ಎಂದು ಹೇಳಿದರು. ದೇವಸ್ಥಾನದ ಟ್ರಸ್ಟ್‌ನವರು ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ವೈಯಕ್ತಿಕ ಲಾಭಕ್ಕಾಗಿ ಪವನ ವಿದ್ಯುತ್ ಕಂಪನಿಗೆ ಜಮೀನು ನೀಡಿರುವುದು ಅಕ್ರಮವಾಗಿದೆ. ದೇವಸ್ಥಾನ ಜಮೀನು ಹಾಗೂ ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಅನಧಿಕೃತವಾಗಿ ಪವನ ವಿದ್ಯುತ್ ಫ್ಯಾನ್‌ಗಳನ್ನು ಅಳವಡಿಸಲಾಗಿದೆ ಎಂದು ಆರೋಪಿಸಿದರು.

ಈ ಬಗ್ಗೆ ಹಲವಾರು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಕ್ರಮ ಕೈಗೊಳ್ಳಲಾಗಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸಿ ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಅಳವಡಿಸಿರುವ ಫ್ಯಾನ್‌ಗಳನ್ನು ತೆರವುಗೊಳಿಸಬೇಕು. ಇಲ್ಲವಾದರೆ ಉಗ್ರ ಹೋರಾಟ ನಡೆಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಮಹಾದೇವಪ್ಪ ಮಾದಣ್ಣವರ, ಕರಿಯಪ್ಪ ಜಂಗವಾಡ, ರಾಜೇಸಾಬ ಬಾಬುಖಾನವರ, ಇಬ್ರಾಹಿಂಸಾಬ ಬಡಿಗೇರ, ಮಹಾಂತೇಶ ದೇಸಳ್ಳಿ, ಶರಣಪ್ಪ ಕಳಸಾಪುರ, ಮಲ್ಲಿಕಾರ್ಜುನ ಕಳಸಾಪುರ, ಅನೀಲ ಒಂಟಿ, ಸಂತೋಷ ಬೆಂತೂರ, ಮಾರುತಿ ಹಿತ್ತಲಮನಿ, ಚಂದ್ರಪ್ಪ ಮಲನಾಡದ, ಮೌಲಸಾಬ ಕರ್ನಾಚಿ, ಅರವಿಂದಪ್ಪ ಗುಡಿ ಸೇರಿದಂತೆ ರೈತರು ಉಪಸ್ಥಿತರಿದ್ದರು.

> “ಕಾಯ್ದಿಟ್ಟ ಅರಣ್ಯ ಪ್ರದೇಶ ಹಾಗೂ ದೇವಸ್ಥಾನಕ್ಕೆ ಸೇರಿದ ಸಾರ್ವಜನಿಕ ಜಮೀನಿನಲ್ಲಿ ಅನಧಿಕೃತವಾಗಿ ಪವನ ವಿದ್ಯುತ್ ಫ್ಯಾನ್ ಅಳವಡಿಸಲಾಗಿದೆ. ಅಧಿಕಾರಿಗಳು ಪರಿಶೀಲಿಸಿ ಕೂಡಲೇ ತೆರವುಗೊಳಿಸಬೇಕು.”
>
> **– ರಮೇಶ ಓಂಕಾರಿ,** ರೈತ, ಸೊರಟೂರು.

1) ಯಲಿಶಿರೂರು ಗ್ರಾಪಂ ವ್ಯಾಪ್ತಿಯ ಇನಾಂ ವೆಂಕಟಾಪುರ ಬಳಿ ಘಟನೆ
2) ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಪವನ ವಿದ್ಯುತ್ ಫ್ಯಾನ್ ಅಳವಡಿಕೆ ಆರೋಪ
3) ದೇವಸ್ಥಾನ ಜಮೀನು ದುರುಪಯೋಗ ಆರೋಪ
4) ಅಧಿಕಾರಿಗಳು ಪರಿಶೀಲಿಸಿ ತೆರವುಗೊಳಿಸಲು ರೈತರ ಒತ್ತಾಯ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

# ಧಾರವಾಡ: 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

2026-27ನೇ ಸಾಲಿನ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ಕಾರ್ಯಕ್ರಮಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಅವಧಿ ಮೇ 2, 2026ರಿಂದ ಫೆಬ್ರವರಿ 28, 2027 ರವರೆಗೆ ಇರಲಿದ್ದು, ಈ ತರಬೇತಿಗೆ ಐದು ಮಹಿಳೆಯರು ಹತ್ತು ಪುರುಷರು ಸೇರಿದಂತೆ ಒಟ್ಟು 15 ಅಭ್ಯರ್ಥಿಗಳು ಆಯ್ಕೆ ಮಾಡಲಿದ್ದಾರೆ.

**ಅರ್ಜಿ ಶುಲ್ಕ:** ಸಾಮಾನ್ಯ ಅಭ್ಯರ್ಥಿಗಳಿಗೆ ರೂ. 30, ಪರಿಶಿಷ್ಟ ಜಾತಿ/ಪಂಗಡ ಅಭ್ಯರ್ಥಿಗಳಿಗೆ ರೂ. 15 ರೂ ಆಗಿರಲಿದೆ. ಶುಲ್ಕವನ್ನು ಇಂಡಿಯನ್ ಪೋಸ್ಟಲ್ ಆರ್ಡರ್, ಚೆಕ್ ಅಥವಾ ಡಿಮ್ಯಾಂಡ್ ಡ್ರಾಫ್ಟ್ ಮುಖೇನ ತೋಟಗಾರಿಕೆ ಜಂಟಿ ನಿರ್ದೇಶಕರು (ಜಿಲ್ಲಾ ಪಂಚಾಯತ್), ಧಾರವಾಡ ಹೆಸರು ಮೀರಿಸಿ ಲಗತ್ತಿಸಬೇಕು.

ಅರ್ಜಿಯ ಫಾರ್ಮ್ ಅನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ), ಧಾರವಾಡ ಕಚೇರಿ ಅಥವಾ ತೋಟಗಾರಿಕೆ ಇಲಾಖೆ ವೆಬ್‌ಸೈಟ್ ನಲ್ಲಿ ಮಾರ್ಚ್ 12, 2026 – ಎಪ್ರಿಲ್ 13, 2026 ನಡುವೆ ಡೌನ್‌ಲೋಡ್ ಮಾಡಿ, ಭರ್ತಿಯಾದ ಅರ್ಜಿಗಳು ಎಪ್ರಿಲ್ 15, 2026 ಒಳಗೆ ಪೂರ್ಣ ದಾಖಲೆಗಳೊಂದಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ: ದೂರವಾಣಿ: 0836-2957801 ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ), ಧಾರವಾಡ ಕಚೇರಿಗೆ ಭೇಟಿ ನೀಡಲು ಸೂಚಿಸಲಾಗಿದೆ.

### ತಹಶೀಲ್ದಾರ್ ರಾಘವೇಂದ್ರ ಕಟ್ಟುನಿಟ್ಟಿನ ಸೂಚನೆ

# ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಕಲುಗೆ ಅವಕಾಶ ಇಲ್ಲ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮಾರ್ಚ್ 18ರಿಂದ ಶಿರಹಟ್ಟಿ ತಾಲೂಕಿನಲ್ಲಿ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳಲ್ಲಿ ಯಾವುದೇ ರೀತಿಯ ನಕಲು ಅಥವಾ ಅವಘಡಕ್ಕೆ ಅವಕಾಶ ನೀಡದಂತೆ ತಹಶೀಲ್ದಾರ್ ಕೆ. ರಾಘವೇಂದ್ರ ಸೂಚಿಸಿದ್ದಾರೆ.

ಶಿರಹಟ್ಟಿ ಕಚೇರಿಯಲ್ಲಿ ನಡೆದ ಪರೀಕ್ಷಾ ಸಿದ್ಧತಾ ಸಭೆಯಲ್ಲಿ ಮಾತನಾಡಿ ಅವರು, ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳನ್ನು ನಿಯಮಬದ್ಧವಾಗಿ ಕಳುಹಿಸಿ, ಕಠಿಣ ತಪಾಸಣೆ ನಡೆಸುವಂತೆ ನಿರ್ದೇಶನ ನೀಡಿದರು.

“ಪರೀಕ್ಷೆಯ ಜವಾಬ್ದಾರಿಯನ್ನು ನಿರ್ವಹಿಸುವ ಎಲ್ಲ ಸಿಬ್ಬಂದಿಗಳು ತಮ್ಮ ಕರ್ತವ್ಯವನ್ನು ಶ್ರದ್ಧೆಯಿಂದ, ಸಮಯಕ್ಕೆ ಮುಂಚಿತವಾಗಿ ನಿರ್ವಹಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾ ಮತ್ತು ಡಿವಿಆರ್‌ಗಳನ್ನು ಮುಂಚಿತವಾಗಿ ಪರಿಶೀಲಿಸಿ ಸುಸ್ಥಿತಿಯಲ್ಲಿ ಇರಬೇಕು,” ಎಂದು ಅವರು ತಿಳಿಸಿದರು.

ಸರ್ಕಾರಿ ಮಾರ್ಗಸೂಚಿಯಂತೆ ಎಲ್ಲಾ ಮೂಲಸೌಲಭ್ಯಗಳು, ನೀರು, ಶೌಚಾಲಯ ಮತ್ತು ವೆಬ್‌ಕಾಸ್ಟಿಂಗ್ ವ್ಯವಸ್ಥೆ, ಸರಿಯಾಗಿ ಕಾರ್ಯನಿರ್ವಹಿಸುತ್ತಿರುವಂತೆ ನೋಡಿಕೊಳ್ಳಲು ಸೂಚಿಸಿದರು. ನಿಯಮ ಉಲ್ಲಂಘನೆಯಾದರೆ ಕಠಿಣ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

ಸಭೆಯಲ್ಲಿ ತಾಪಂ ಇಒ ಆರ್.ವಿ. ದೊಡ್ಡಮನಿ, ಗ್ರೇಡ್-2 ತಹಶೀಲ್ದಾರ್ ವಿ.ಎ. ಮುಳಗುಂದಮಠ, ಬಿಇಒ ಎಚ್. ಎನ್. ನಾಣ್ಕೀನಾಯ್ಕ್, ಇಸಿಒ ಉಮೇಶ ಹುಚ್ಚಯ್ಯನಮಠ, ಶಿರಸ್ತೇದಾರ ಎಸ್.ಎಸ್. ಅಸ್ಕಿ, ಪಿಆರ್‌ಇಡಿ ಎಇಇ ಮಲ್ಲಿಕಾರ್ಜುನ ಪಾಟೀಲ, ಎಸ್.ಎಫ್. ಬಟಗುರ್ಕಿ ಮತ್ತು ಶ್ರೀನಿವಾಸ ನಾಯ್ಕ್ ಹಾಜರಿದ್ದರು.

> ಪರೀಕ್ಷೆಗೆ ಶಿರಹಟ್ಟಿ ತಾಲ್ಲೂಕಿನಲ್ಲಿ 6 ಪರೀಕ್ಷಾ ಕೇಂದ್ರಗಳು ಸ್ಥಾಪನೆಗೊಂಡಿದ್ದು, 169 ಸಿಬ್ಬಂದಿಗಳು ಹಾಗೂ 14 ಸರಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಿಂದ ಒಟ್ಟು 1,229 ವಿದ್ಯಾರ್ಥಿಗಳು ಪರೀಕ್ಷೆಗೆ ಸೇರಿದ್ದಾರೆ. ಇದರಲ್ಲಿ 849 ವಿದ್ಯಾರ್ಥಿಗಳು ಗ್ರಾಮೀಣ ಭಾಗದಿಂದ ಭಾಗವಹಿಸುತ್ತಿದ್ದಾರೆ.

### ಲೋಕಾಯುಕ್ತ ಪ್ರಕರಣದಲ್ಲಿ 18 ದಿನಗಳ ನಂತರ ತಾತ್ಕಾಲಿಕ ರಿಲೀಫ್ – ಇಬ್ಬರು ಆಪ್ತ ಸಹಾಯಕರಿಗೂ ಜಾಮೀನು!

# ಶಾಸಕ ಡಾ. ಚಂದ್ರು ಲಮಾಣಿಗೆ ಷರತ್ತುಬದ್ಧ ಜಾಮೀನು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲೋಕಾಯುಕ್ತ ಪ್ರಕರಣದಲ್ಲಿ ನ್ಯಾಯಾಂಗ ಬಂಧನ ಕ್ಕೊಳಗಾಗಿದ್ದ ಶಾಸಕ ಡಾ. ಚಂದ್ರು ಲಮಾಣಿ ಅವರಿಗೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

ಅವರ ಇಬ್ಬರು ಆಪ್ತ ಸಹಾಯಕರಾದ ಮಂಜುನಾಥ ವಾಲ್ಮೀಕಿ ಹಾಗೂ ಗುರು ಲಮಾಣಿ ಅವರಿಗೆ ಕೂಡ ಜಾಮೀನು ದೊರೆತಿದ್ದು ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ.

ಗುತ್ತಿಗೆದಾರನಿಂದ ಕಮಿಷನ್ ಪಡೆದ ಆರೋಪದಡಿ ಫೆಬ್ರವರಿ 22ರಂದು ಪಟ್ಟಣದಲ್ಲಿನ ಬಾಲಾಜಿ ಆಸ್ಪತ್ರೆಯಲ್ಲಿ ಲೋಕಾಯುಕ್ತ ಪೊಲೀಸರು ಶಾಸಕರನ್ನು ಬಲೆಗೆ ಬೀಳಿಸಿದ್ದರು. ಈ ವೇಳೆ ಶಾಸಕರೊಂದಿಗೆ ಅವರ ಆಪ್ತ ಸಹಾಯಕರಾದ ಮಂಜುನಾಥ ವಾಲ್ಮೀಕಿ ಹಾಗೂ



ಗುರು ಲಮಾಣಿಯನ್ನು ವಶಕ್ಕೆ ಪಡೆದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಹಾಜರು ಪಡಿಸಲಾಗಿತ್ತು. ವಿಚಾರಣೆ ಬಳಿಕ ನ್ಯಾಯಾಲಯವು ಶಾಸಕರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದರಿಂದ ಡಾ. ಚಂದ್ರು ಲಮಾಣಿ ಅವರು ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಕಳೆದ 18 ದಿನಗಳಿಂದ ಬಂಧನದಲ್ಲಿದ್ದರು.

ಬುಧವಾರ ನಡೆದ ಜಾಮೀನು ಅರ್ಜಿ ವಿಚಾರಣೆ ವೇಳೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಶಾಸಕರಿಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದ್ದು, ಇದರಿಂದ ಅವರಿಗೆ ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ.

ಶಾಸಕರ ಬಿಡುಗಡೆಗಾಗಿ ಕಳೆದ ಎರಡು ದಿನಗಳಿಂದ ಕ್ಷೇತ್ರದ ವಿವಿಧ ದೇವಸ್ಥಾನಗಳಲ್ಲಿ ವಿಶೇಷ ಪೂಜೆ-ಪ್ರಾರ್ಥನೆಗಳು ನಡೆಯುತ್ತಿದ್ದವು. ಜಾಮೀನು ಮಂಜೂರಾದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಅಭಿಮಾನಿಗಳಲ್ಲಿ ಹರ್ಷ ವ್ಯಕ್ತವಾಗಿದೆ. ಗುರುವಾರ ಅವರನ್ನು ಸ್ವಾಗತಿಸಲು ಕ್ಷೇತ್ರದ ಜನರು ಕಾತುರದಿಂದ ಕಾಯುತ್ತಿದ್ದಾರೆ.


ಶಾಸಕರ ವಿರುದ್ಧದ ಲೋಕಾಯುಕ್ತ ಪ್ರಕರಣ ರಾಜ್ಯ ರಾಜಕೀಯ ವಲಯದಲ್ಲಿಯೂ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದು, ಮುಂದಿನ ತನಿಖೆ ಹಾಗೂ ನ್ಯಾಯಾಂಗ ಪ್ರಕ್ರಿಯೆಯ ಮೇಲೆ ಎಲ್ಲರ ಗಮನ ನೆಟ್ಟಿದೆ.

### ಫೆ.22ರಂದು ಲೋಕಾಯುಕ್ತ ಬಲೆ

1) ಬಾಲಾಜಿ ಆಸ್ಪತ್ರೆಯಲ್ಲಿ ಬಂಧನ
2) 18 ದಿನ ಪರಪ್ಪನ ಅಗ್ರಹಾರ ಜೈಲು ವಾಸ
3) ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಿಂದ ಷರತ್ತುಬದ್ಧ ಜಾಮೀನು
4) ಇಬ್ಬರು ಆಪ್ತ ಸಹಾಯಕರಿಗೂ ಜಾಮೀನು ದೊರೆತಿದೆ.

# ರಾಮನಗರದಲ್ಲಿ ಶ್ರೀ ದುರುಗಮ್ಮ ದೇವಿಗೆ ಮಹಾಭಿಷೇಕ

## - ಮೂರ್ತಿ ಪ್ರತಿಷ್ಠಾಪನೆ ವಾರ್ಷಿಕೋತ್ಸವ



■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ರಾಮನಗರ ಗ್ರಾಮ ದೇವತೆಯಾದ ಶ್ರೀ ನೆರಗಲ್ ದುರುಗಮ್ಮ ದೇವಿಯ ಹೊಸ ಮೂರ್ತಿ ಪ್ರತಿಷ್ಠಾಪನೆಗೆ ಒಂದು ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ವಿಶೇಷ ಪೂಜೆಗಳು ಭಕ್ತಿಭಾವದಿಂದ ನೆರವೇರಿದವು.

ಈ ಅಂಗವಾಗಿ ಮಂಗಳವಾರ ಬೆಳಿಗ್ಗೆ ಅಂದರದ ಪೂಜೆ ನಡೆಯಿತು. ಮಾರ್ಚ್ 10ರಂದು ದೇವಿಗೆ ಮಹಾಭಿಷೇಕ, ವಿಶೇಷ ಪೂಜೆ, ಫಲ-ಪುಷ್ಪ ಸಮರ್ಪಣೆ ಹಾಗೂ ಬೃಹತ್ ಹೂವಿನ ಅಲಂಕಾರ ಮಾಡಲಾಗಿದ್ದು, ಮಹಾಮಂಗಳಾರತಿ ಹಾಗೂ ಮಹಾಪೂಜೆ ನೆರವೇರಿಸಲಾಯಿತು.

ಶ್ರೀ ದುರುಗಮ್ಮ ದೇವಿ ದೇವಸ್ಥಾನದ ಸೇವಾ ಸಮಿತಿ ಹಾಗೂ ರಾಮನಗರ ದೈವಸ್ಥರು ಭಕ್ತರಿಗೆ ಪ್ರಸಾದದ ವ್ಯವಸ್ಥೆ ಮಾಡಿದ್ದರು.

ಈ ಸಂದರ್ಭದಲ್ಲಿ ರೈತರ ಓಣಿ ಹಾಗೂ ಪಟ್ಟಣದ ಸಮಸ್ತ ಭಕ್ತಾದಿಗಳು ಮಹಾಪೂಜೆಯಲ್ಲಿ ಪಾಲ್ಗೊಂಡು ದೇವಿಯ ಆಶೀರ್ವಾದ ಪಡೆದರು. ಕಾರ್ಯಕ್ರಮದಲ್ಲಿ ಶ್ರೀ ದುರುಗಮ್ಮ ದೇವಿ ಸೇವಾ ಸಮಿತಿ ಅಧ್ಯಕ್ಷರು, ಸರ್ವ ಸದಸ್ಯರು, ರಾಮನಗರ ದೈವಸ್ಥರು ಹಾಗೂ ಅನೇಕ ಭಕ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

**ಕಡಲಬಾಳು ಗ್ರಾಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ದತ್ತಿ ಉಪನ್ಯಾಸ**

# ವಿದ್ಯಾರ್ಥಿಗಳು ಮಹಾನ್ ವ್ಯಕ್ತಿಗಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲಿ



"ಮಕ್ಕಳು ಪುಸ್ತಕಗಳನ್ನು ಪ್ರೀತಿಸಿದರೆ ಜಗತ್ತೇ ಅವರನ್ನು ಪ್ರೀತಿಸುತ್ತದೆ. ಮಹಾನ್ ವ್ಯಕ್ತಿಗಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಭವಿಷ್ಯ ಉಜ್ವಲವಾಗುತ್ತದೆ."

– **ಎಂ. ಹುಲುಗಪ್ಪ,** ಮುಖ್ಯ ಉಪನ್ಯಾಸಕರು.

### ದತ್ತಿದಾನಿಗಳಿಗೆ ಸನ್ಮಾನ

ಕಾರ್ಯಕ್ರಮದಲ್ಲಿ ದತ್ತಿದಾನಿಗಳ ವಂಶಸ್ಥರಾದ ಅಕ್ಕಿ ಪ್ರಸನ್ನ, ಕಡ್ಡಿ ಮಲ್ಲಿಕಾರ್ಜುನ, ಹುರಕಡ್ಲಿ ಶಿವಕುಮಾರ, ಮಾತಾ ಗ್ಯಾಸ್ ಲಕ್ಷ್ಮೀನಾರಾಯಣ ಹಾಗೂ ಕೋಡಿಹಳ್ಳಿ ರಾಮಲಿಂಗಪ್ಪ ಅವರನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಸನ್ಮಾನಿಸಲಾಯಿತು.

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಕಡಲಬಾಳು ಗ್ರಾಮದ ಶ್ರೀ ಗುರು ಶಿವಶಾಂತವೀರ ಪ್ರೌಢಶಾಲೆಯಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಘಟಕದ ವತಿಯಿಂದ ದತ್ತಿ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ದತ್ತಿದಾನಿಗಳ ವಂಶಸ್ಥರಾದ ಅಕ್ಕಿ ಪ್ರಸನ್ನ, ಕಡ್ಡಿ ಮಲ್ಲಿಕಾರ್ಜುನ, ಹುರಕಡ್ಲಿ ಶಿವಕುಮಾರ, ಮಾತಾ ಗ್ಯಾಸ್ ಲಕ್ಷ್ಮೀನಾರಾಯಣ ಹಾಗೂ ಕೋಡಿಹಳ್ಳಿ ರಾಮಲಿಂಗಪ್ಪ ಉಪಸ್ಥಿತರಿದ್ದರು. ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿ ನಡೆಸುತ್ತಿರುವ ದತ್ತಿ ಕಾರ್ಯಕ್ರಮಗಳನ್ನು ಅವರು ಸ್ಮರಿಸಿ, ಕನ್ನಡ ತಾಯಿಯ ಸೇವೆಗೆ ನೀಡಿದ ದತ್ತಿಗಳು ಫಲಪ್ರದವಾಗುತ್ತಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು.

ಕಾರ್ಯಕ್ರಮವನ್ನು ಶಾಲೆಯ ಮುಖ್ಯೋಪಾಧ್ಯಾಯರಾದ ಕೆ.ಎಂ. ಜ್ಞಾನೋದಯ ಉದ್ಘಾಟಿಸಿ ಮಾತನಾಡಿ, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಲಿ ಎಂದು ಶುಭ ಹಾರೈಸಿದರು.

ಮುಖ್ಯ ಉಪನ್ಯಾಸಕರಾದ ಎಂ. ಹುಲುಗಪ್ಪ ಮಾತನಾಡಿ, ಬಸವ, ಗಾಂಧಿ ಮತ್ತು ಅಂಬೇಡ್ಕರ್ ಅವರ ವಿಚಾರಧಾರೆಗಳು ಹಾಗೂ ಪುಸ್ತಕ ಸಂಸ್ಕೃತಿ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿದರು. ವಿದ್ಯಾರ್ಥಿಗಳು ಮಹಾನ್ ವ್ಯಕ್ತಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಭವಿಷ್ಯವನ್ನು ಸಾರ್ಥಕಗೊಳಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಗಣೇಶ್ ರಾವ್ ಮತ್ತು ವಿ.ಬಿ. ಮಲ್ಲೇಶಪ್ಪ ಮಾತನಾಡಿ, ವಿದ್ಯಾರ್ಥಿಗಳು ಪುಸ್ತಕಗಳನ್ನು ಪ್ರೀತಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಗೂಳಪ್ಪ ಹುಲಿಮನಿ ದತ್ತಿದಾನಿಗಳನ್ನು ಸನ್ಮಾನಿಸಿ, ಅವರ ಸೇವೆಯಿಂದ ಇಂತಹ ಕಾರ್ಯಕ್ರಮಗಳು ಸಾಧ್ಯವಾಗುತ್ತಿವೆ ಎಂದು ಹೇಳಿದರು. ವಿದ್ಯಾರ್ಥಿಗಳು ಮಾತೃಭಾಷೆ ಕನ್ನಡವನ್ನು ಪ್ರೀತಿಸಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಭೇಟಿ ಮಾರುತಿ, ಖಜಾಂಚಿ ಪಿ.ಜಿ. ಪ್ರಹ್ಲಾದ್, ಹೋಬಳಿ ಅಧ್ಯಕ್ಷ ಎಸ್.ವಿ. ಪಾಟೀಲ್, ಎಲ್. ಬಸವರಾಜಪ್ಪ, ತಂಬ್ರಹಳ್ಳಿ ಬಿ. ಶ್ರೀನಿವಾಸ್, ತಾಲೂಕು ಕಾರ್ಯನಿರತ ಅಧ್ಯಕ್ಷ ಹಾಗೂ ಪತ್ರಕರ್ತರ ಸಂಘದ ಅಧ್ಯಕ್ಷ ವಿಶ್ವನಾಥ್ ಬಾವಿಕಟ್ಟಿ, ಪತ್ರಕರ್ತ ಲಕ್ಷ್ಮಿಕಾಂತ್, ಉಪನ್ಯಾಸಕ ಸಾಬುದ್ದೀನ್ ಸಾಬ್ ಸೇರಿದಂತೆ ಶಾಲಾ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಹಗರಿಬೊಮ್ಮನಹಳ್ಳಿಯಲ್ಲಿ ಸರ್ಕಾರಿ ನೌಕರರ ಸಂಘದಿಂದ ವಿಶ್ವ ಮಹಿಳಾ ದಿನಾಚರಣೆ**

# ಮಹಿಳೆಯರು ಜಾಗೃತಿಯಿಂದ ಸ್ವಾವಲಂಬಿಗಳಾಗಬೇಕು



"ಕುಟುಂಬದ ಏಳ್ಗೆ ಮತ್ತು ಭವಿಷ್ಯವನ್ನು ಮಹಿಳೆಯರು ನಿರ್ಧರಿಸುತ್ತಾರೆ. ಆದ್ದರಿಂದ ಮಹತ್ವದ ವಿಷಯಗಳನ್ನು ಮಹಿಳೆಯರೊಂದಿಗೆ ಚರ್ಚಿಸುವುದು ಅಗತ್ಯ."

– **ಪದ್ಮ ವಿಠ್ಠಲ್,** ಸಾಹಿತಿಗಳು.

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕುಟುಂಬದ ಏಳ್ಗೆ ಮತ್ತು ಭವಿಷ್ಯವನ್ನು ಮಹಿಳೆಯರು ನಿರ್ಧರಿಸುತ್ತಾರೆ. ಆದ್ದರಿಂದ ಮಹತ್ವದ ವಿಷಯಗಳನ್ನು ಪುರುಷರು ಮಹಿಳೆಯರೊಂದಿಗೆ ಚರ್ಚಿಸುವುದು ಅಗತ್ಯವಾಗಿದೆ ಎಂದು ಸಂಘಪರಿವಾರದ ಹಿರಿಯ ಸಾಹಿತಿಗಳು ಎನ್. ಪದ್ಮ ವಿಠ್ಠಲ ಹೇಳಿದರು.

ಪಟ್ಟಣದ ರಾಷ್ಟ್ರೋತ್ಥಾನ ಸಭಾಂಗಣದಲ್ಲಿ ಸರ್ಕಾರಿ ನೌಕರರ ಸಂಘದಿಂದ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನ ದಿನಗಳಲ್ಲಿ ಮಹಿಳೆಯರು ಉದ್ಯೋಗದ ಜೊತೆಗೆ ಕುಟುಂಬದ ಪಾಲನೆ ಮತ್ತು ಜವಾಬ್ದಾರಿಗಳನ್ನು ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ. ಮಕ್ಕಳನ್ನು ಬೆಳೆಸುವ ಹೊಣೆಗಾರಿಕೆಯೂ ಮಹಿಳೆಯರ ಮೇಲಿದೆ. ಕುಟುಂಬವನ್ನು ಆರ್ಥಿಕವಾಗಿ ಬಲಿಷ್ಠಗೊಳಿಸಲು ಮಹಿಳೆಯರು ಉದ್ಯೋಗಸ್ಥರಾಗುವುದು ಅನಿವಾರ್ಯವಾಗಿದೆ ಎಂದು ಹೇಳಿದರು.

ಪ್ರಸ್ತಾವಿಕವಾಗಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎಂ.ಪಿ.ಎಂ. ಮಂಜುನಾಥ ಮಾತನಾಡಿ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು ಹಾಗೂ ಪೌರಕಾರ್ಮಿಕ ಮಹಿಳೆಯರ ಸೇವೆಯನ್ನು ಗುರುತಿಸಿ ಈ ವರ್ಷ ಅವರನ್ನು ಸನ್ಮಾನಿಸುತ್ತಿರುವುದು ಸಂಘದ ಹೆಮ್ಮೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷೆ ನಾಗರತ್ನ ವೈ. ಇಟಗಿ, ಸಂಘದ ಪದಾಧಿಕಾರಿಗಳಾದ ಆರ್. ಜಯಶ್ರೀ, ಅರ್ಪಿತ ಆನಂದ್, ಗಾಳೆಮ್ಮ, ಸಾವಿತ್ರಿ ಬಾಯಿಫುಲೆ ಶಿಕ್ಷಕಿಯರ ಸಂಘದ ದೀಪಿಕಾ, ಅಂಗನವಾಡಿ ಕಾರ್ಯಕರ್ತೆಯರ ಸಂಘದ ಅಧ್ಯಕ್ಷೆ ಜೆ.ಎಂ. ಜ್ಯೋತೇಶ್ವರಿ, ತಾಲೂಕು ಆಶಾ ಕಾರ್ಯಕರ್ತೆಯರ ಸಂಘದ ಅಧ್ಯಕ್ಷೆ ಗೌರಮ್ಮ, ಆಯುಷ್ಯ ವೈದ್ಯೆ ಡಾ. ಹಾಲಮ್ಮ, ಎಂ. ಯಂಕರೆಡ್ಡಿ, ಹಂಸಾಗರದ ಆನಂದ, ಆಂಜನೇಯ, ಸೋಮಶೇಖರ್, ಎನ್. ಮಂಜುನಾಥ, ಸದಸ್ಯರಾದ ರಾಜು ಸೋಗಿ, ಸೊನ್ನದ ಕೊಟ್ರೇಶ್, ಹೆಚ್. ಲೋಕಪ್ಪ, ಗುಲ್ಜಾರ್ ಬೇಗಮ್, ನಾಗಲಕ್ಷ್ಮಿ, ಕೆ.ಎಂ. ನಿರ್ಮಲ, ಭಾರತೀ, ಪ್ರಮೋದಿನಿ, ಕವಿತಾ, ಉಷಾರಾಣಿ, ಖಾಜಾಬೂನ, ಶಾಂತಕುಮಾರಿ, ಶೋಭಾ, ಶಾರದಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಆಂಜನೇಯ ಸ್ವಾಮಿಯ ನೂತನ ರಥದ ವಿಜೃಂಭಣೆಯ ಪುರಪ್ರವೇಶ



"ಗ್ರಾಮಸ್ಥರ ಸಹಕಾರ ಮತ್ತು ಭಕ್ತಿಯಿಂದ ನೂತನ ರಥ ನಿರ್ಮಾಣ ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ರಥೋತ್ಸವವನ್ನು ಇನ್ನಷ್ಟು ವಿಜೃಂಭಣೆಯಿಂದ ಆಚರಿಸುವುದು ನಮ್ಮ ಸಂಕಲ್ಪ."

– **ಗ್ರಾಮದ ಮುಖಂಡರು.**

### ಮಾರ್ಚ್ 27ರಂದು ನೂತನ ರಥೋತ್ಸವ!

ಬಾಚಿಗೊಂಡನಹಳ್ಳಿ 2ನೇ ಕಾಲೋನಿಯಲ್ಲಿ ನಿರ್ಮಿಸಲಾದ ಶ್ರೀ ಆಂಜನೇಯ ಸ್ವಾಮಿಯ ನೂತನ ರಥದ ಮಹೋತ್ಸವ ಇದೇ ತಿಂಗಳ 27ರಂದು ನಡೆಯಲಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆ ವ್ಯಕ್ತವಾಗಿದೆ.

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಬಾಚಿಗೊಂಡನಹಳ್ಳಿ 2ನೇ ಕಾಲೋನಿಯಲ್ಲಿ ಶ್ರೀ ಆಂಜನೇಯ ಸ್ವಾಮಿ ಹಾಗೂ ಬಸವೇಶ್ವರಸ್ವಾಮಿಯ ರಥೋತ್ಸವವನ್ನು ಸುಮಾರು 75 ವರ್ಷಗಳಿಂದ ಭಕ್ತಿಪೂರ್ವಕವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಿಕೊಂಡು ಬರುತ್ತಿದ್ದಾರೆ. ಈ ಪರಂಪರೆಯನ್ನು ಮುಂದುವರಿಸುತ್ತಾ ಗ್ರಾಮಸ್ಥರ ಸಹಕಾರ ಮತ್ತು ಗ್ರಾಮದ ಹಿರಿಯರ ಹಿತಾಸಕ್ತಿಯಿಂದ 2026ನೇ ಸಾಲಿಗೆ ನೂತನ ರಥವನ್ನು ಸಿದ್ಧಪಡಿಸಲಾಗಿದೆ.

ಇದೇ ತಿಂಗಳ 27ರಂದು ನೂತನ ರಥೋತ್ಸವವನ್ನು ಆಯೋಜಿಸಲು ನಿರ್ಧರಿಸಲಾಗಿದೆ. ಇದರ ಅಂಗವಾಗಿ ನೂತನ ರಥದ ಪುರಪ್ರವೇಶ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.

ಗ್ರಾಮದ ಮಹಿಳೆಯರು ಕಳಸ ಬೆಳಗುವ ಮೂಲಕ, ಸಕಲ ವಾದ್ಯಗಳೊಂದಿಗೆ ವಿಜೃಂಭಣೆಯಿಂದ ನೂತನ ರಥವನ್ನು ಗ್ರಾಮಕ್ಕೆ ಬರಮಾಡಿಕೊಂಡರು. ಹಗರಿಬೊಮ್ಮನಹಳ್ಳಿ ಪಟ್ಟಣದ ರಥದ ಶಿಲ್ಪಿ ಎಂದೇ ಖ್ಯಾತರಾದ ರಾಜ್ಯ ಪ್ರಶಸ್ತಿ ಹಾಗೂ ಜಕಣಾಚಾರಿ ಪ್ರಶಸ್ತಿ ವಿಜೇತ ಡಾ. ಸಿದ್ದಪ್ಪ ಬಡಿಗೇರ್ ಅವರು ಈ ನೂತನ ರಥವನ್ನು ಅತ್ಯಂತ ಭಕ್ತಿ ಹಾಗೂ ಶ್ರದ್ಧೆಯಿಂದ ನಿರ್ಮಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ತಾಲೂಕು ಪಂಚಾಯತಿ ಮಾಜಿ ಸದಸ್ಯ ನೇತಾಜಿ ಗೌಡ್ರು, ಹೊಳಗುಂದಿ ಕೊಟ್ರೆಶಪ್ಪ, ಒಳ ಬಸಪ್ಪ, ದಾವಲ್ ಸಾಬ್, ವೀರಭದ್ರಪ್ಪ, ಆನಂದ್, ಯಮನೂರಿ, ಶ್ರೀನಿವಾಸ್, ಸುರೇಶ್, ವೀರೇಶ್ ಸೇರಿದಂತೆ ಗ್ರಾಮದ ಗುರು ಹಿರಿಯರು ಹಾಗೂ ಸಮಸ್ತ ಗ್ರಾಮಸ್ಥರು ಉಪಸ್ಥಿತರಿದ್ದರು.

**ವಿಠ್ಠಲ ರುಕುಮಾಯಿ ದೇವಸ್ಥಾನದಲ್ಲಿ ಮೂರು ದಿನಗಳ ಧಾರ್ಮಿಕ ಕಾರ್ಯಕ್ರಮ – ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ**

# ಭಾವಸಾರ ಕ್ಷತ್ರಿಯ ಸಮಾಜದಿಂದ ದಿಂಡಿ ಉತ್ಸವ ಆರಂಭ



"ಮನುಷ್ಯನಿಗೆ ವಿದ್ಯೆ ಅತ್ಯವಶ್ಯಕ. ವಿದ್ಯೆಯೊಂದಿಗೆ ಮನಸ್ಸಿಗೆ ನೆಮ್ಮದಿ ನೀಡುವ ಪಾರಮಾರ್ಥಿಕ ಜೀವನಕ್ಕೂ ಸಮಯ ನೀಡಬೇಕು. ಮಕ್ಕಳಲ್ಲಿ ಧಾರ್ಮಿಕ ಹಾಗೂ ಸಾಂಸ್ಕೃತಿಕ ಮೌಲ್ಯಗಳನ್ನು ಬೆಳೆಸುವುದು ಅಗತ್ಯ."

– **ಹಭಪ ವಿಠ್ಠಲ್ ಗುರೂಜಿ ಬೆಳಮಕರ್,** ಕೊಪ್ಪಳ.

### ದಿಂಡಿ ಉತ್ಸವದ ಪ್ರಮುಖ ಕಾರ್ಯಕ್ರಮಗಳು

1) ಕಾಕಡಾರತಿ
2) ಶ್ರೀ ಜ್ಞಾನೇಶ್ವರಿ ಗ್ರಂಥದ ಸಾಮೂಹಿಕ ಪಾರಾಯಣ
3) ಪ್ರವಚನ ಮತ್ತು ನಾಮಜಪ
4) ಕೀರ್ತನೆ ಭಜನೆ
5) ಎಸ್ಎಸ್ಎಲ್‌ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಭಾವಸಾರ ಕ್ಷತ್ರಿಯ ಸಮಾಜದವರು ಪ್ರತಿವರ್ಷದಂತೆ ದಿಂಡಿ ಉತ್ಸವವನ್ನು ಮೂರು ದಿನಗಳ ಕಾಲ ಪೇಠ ರಸ್ತೆಯಲ್ಲಿರುವ ವಿಠ್ಠಲ ರುಕುಮಾಯಿ ದೇವಸ್ಥಾನದಲ್ಲಿ ಸೋಮವಾರದಿಂದ ಪ್ರಾರಂಭಿಸಿದ್ದಾರೆ. ಈ ಅಂಗವಾಗಿ ಪೋಥಿ ಸ್ಥಾಪನೆ, ಗುಲಾ ಕೀರ್ತನೆ, ಪ್ರವಚನ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ಸೋಮವಾರ ನಸುಕಿನ 5 ಗಂಟೆಗೆ ಕಾಕಡಾರತಿ ನೆರವೇರಿತು. ಬಳಿಕ ಬೆಳಗ್ಗೆ 7 ಗಂಟೆಯಿಂದ ಸಮಾಜದ ಪುರುಷರು ಮತ್ತು ಮಹಿಳೆಯರು ಸೇರಿ ದೇವಸ್ಥಾನದ ಆವರಣದಲ್ಲಿ ಶ್ರೀ ಜ್ಞಾನೇಶ್ವರಿ ಗ್ರಂಥದ ಸಾಮೂಹಿಕ ಪಾರಾಯಣ ನಡೆಸಿದರು. ನಂತರ ಪ್ರವಚನ, ನಾಮಜಪ, ಕೀರ್ತನೆ ಮೊದಲಾದ ಕಾರ್ಯಕ್ರಮಗಳು ಸಂಪ್ರದಾಯದಂತೆ ಜರುಗಿದವು.

ದಿಂಡಿ ಉತ್ಸವದ ಎರಡನೇ ದಿನವಾದ ಮಂಗಳವಾರ ಸಂಜೆ ಸಮಾಜದ ವತಿಯಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಆಯೋಜಿಸಲಾಗಿತ್ತು. ಎಸ್ಎಸ್ಎಲ್‌ಸಿ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸಮಾಜದ ವತಿಯಿಂದ ಸನ್ಮಾನಿಸಲಾಯಿತು.

ಸಭೆಯಲ್ಲಿ ಸಮಾಜದ ಮಹಿಳಾ ಮಂಡಳದ ಅಧ್ಯಕ್ಷೆ ರುಕ್ಮಿಣಿ ರಂಪೂರೆ ಅಧ್ಯಕ್ಷತೆ ವಹಿಸಿದ್ದರು. ತುಕಾರಾಮ ಗುರೂಜಿ ಹಜಾರೆ, ದಿಗಂಬರ ಪೂಜಾರ, ಮಂಜುನಾಥ ಹೊಗೆಸೊಪ್ಪಿನ್, ಚಂದನಾ ಅಜಿತ್ ಬರಿಗಾಲಿ, ಮಾರುತಿ ಮಾಳದಕರ, ಪುಂಡಲೀಕರಾವ ಮಾತಾಡೆ, ಕಾಶೀನಾಥ ಬೋಮಲೆ, ಕಿರಣ ನವಲೆ, ಸತೀಶ ಮಾಂಡ್ರೇ, ಸಂತೋಷ ಸರ್ವದೆ, ವಾಸು ಬೋಮಲೆ, ಅರುಣ ನವಲೆ, ರಮೇಶ ನವಲೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಮುಂಡರಗಿ ಪುರಸಭೆ 2026-27ರ ಬಜೆಟ್ ಪೂರ್ವಭಾವಿ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂಡರಗಿ ಪಟ್ಟಣದ ಸಾರ್ವಜನಿಕರು ಹಾಗೂ ವಿವಿಧ ಸಂಘ-ಸಂಸ್ಥೆಗಳಿಗೆ ತಿಳಿಸುವುದೇನೆಂದರೆ ಪುರಸಭೆಯ 2026-27ನೇ ಸಾಲಿನ ಬಜೆಟ್ ತಯಾರಿಕೆ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ಸಲಹೆ ಹಾಗೂ ಸೂಚನೆಗಳನ್ನು ಪಡೆಯಲು ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ.

ಈ ಸಭೆಯನ್ನು ಮಾರ್ಚ್ 12ರಂದು ಸಾಯಂಕಾಲ 4 ಗಂಟೆಗೆ ಮುಂಡರಗಿ ಪುರಸಭೆ ಸಭಾಭವನದಲ್ಲಿ ನಡೆಸಲು ಆಡಳಿತಾಧಿಕಾರಿಗಳು ನಿಗದಿಪಡಿಸಿದ್ದಾರೆ.

ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಸಭೆಗೆ ಆಗಮಿಸಿ ಬಜೆಟ್ ರೂಪಿಕರಣಕ್ಕೆ ಸಂಬಂಧಿಸಿದಂತೆ ತಮ್ಮ ಅಮೂಲ್ಯ ಸಲಹೆ-ಸೂಚನೆಗಳನ್ನು ನೀಡುವಂತೆ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದಾವಣಗೆರೆ ಯುಗಮಾನೋತ್ಸವ ರದ್ದು: ಹಾವೇರಿಯಲ್ಲಿ ನಡೆಸಲು ತೀರ್ಮಾನ!



■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ನಗರದಲ್ಲಿ ಮಾರ್ಚ್ 23, 24 ಮತ್ತು 25ರಂದು ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವ ನಡೆಸಲು ನಿರ್ಧರಿಸಲಾಗಿತ್ತು. ಆದರೆ ದಾವಣಗೆರೆ ದಕ್ಷಿಣ ವಿಧಾನ ಸಭಾ ಕ್ಷೇತ್ರದಲ್ಲಿ ಉಪಚುನಾವಣೆ ಘೋಷಣೆಯಾಗುವ ಸಾಧ್ಯತೆ ಇದೆ. ಚುನಾವಣೆ ಘೋಷಣೆಯಾದರೆ ನೀತಿ ಸಂಹಿತೆ ಜಾರಿಗೆ ಬಂದರೆ ಕಾರ್ಯಕ್ರಮಕ್ಕೆ ತೊಂದರೆ ಆಗಬಹುದೆಂಬ ಕಾರಣದಿಂದ ಯುಗಮಾನೋತ್ಸವ ಸಮಾರಂಭವನ್ನು ರದ್ದುಪಡಿಸಲಾಗಿದೆ ಎಂದು ಪಂಚಪೀಠ ಒಕ್ಕೂಟದ ಸಂಚಾಲಕರಾದ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದ್ದಾರೆ.

ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವವನ್ನು ಹಾವೇರಿ ಜಿಲ್ಲೆ ನೆಗಳೂರು ಹಿರೇಮಠದಲ್ಲಿ ಮಾರ್ಚ 22 ಮತ್ತು 23ರಂದು ನಡೆಸಲು ನಿರ್ಧರಿಸಲಾಗಿದೆ ಎಂದು ಭಕ್ತ ಸಮುದಾಯಕ್ಕೆ ತಿಳಿಸಿದ್ದಾರೆ. ಕಾರ್ಯಕ್ರಮದ ವಿವರ ನೀಡಿರುವ ಅವರು ಮಾರ್ಚ 22ರಂದು ಮಧ್ಯಾಹ್ನ 3 ಗಂಟೆಗೆ ಶ್ರೀ ರಂಭಾಪುರಿ ಶ್ರೀ ಉಜ್ಜಯಿನಿ ಶ್ರೀಶೈಲ ಮತ್ತು ಶ್ರೀ ಕಾಶಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ-ಧರ್ಮ ಸಂದೇಶ ನಂತರ 5.30 ಗಂಟೆಗೆ ನೆಗಳೂರು ಹಿರೇಮಠದ ನೂತನ ರಥದ ಉದ್ಘಾಟನೆಗೆ ಜಗದ್ಗುರುಗಳು ಚಾಲನೆ ನೀಡಲಿದ್ದಾರೆ.

ಮಾರ್ಚ್ 23ರಂದು ಬೆಳಿಗ್ಗೆ 11 ಗಂಟೆಗೆ ಹಿರೇಮಠದ ಆವರಣದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಯುಗಮಾನೋತ್ಸವಕ್ಕೆ ಚಾಲನೆ ನೀಡುವರು. ಸಮಾರಂಭವನ್ನು ವಿಧಾನಸಭಾ ಉಪಸಭಾಪತಿ ರುದ್ರಪ್ಪ ಲಮಾಣಿ ಉದ್ಘಾಟಿಸಲಿದ್ದಾರೆ. ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಶ್ರೀಮತ್ಕಾಶಿ ಡಾ. ಚಂದ್ರಶೇಖರ ಜಗದ್ಗುರುಗಳಿಂದ ರಚಿಸಲ್ಪಟ್ಟ 'ವೀರಶೈವ ಪಂಚ ಸೂತ್ರ ಪ್ರವಚನ' ಗ್ರಂಥವನ್ನು ಅಮೆರಿಕ ಷಿಕ್ಯಾಗೋದ ಖ್ಯಾತ ಸಾಹಿತ್ಯ ಸಂಶೋಧಕರಾದ ರವಿ ಹಂಜ್ ಬಿಡುಗಡೆಗೊಳಿಸಿ ಮಾತನಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಯುವ ಸಾಹಿತಿ ಪತ್ರಕರ್ತ ಪ್ರಶಾಂತ್ ರಿಪ್ಪನ್‌ಪೇಟೆ ಅವರು 'ವೀರಶೈವ ಪಂಚಸೂತ್ರ ಪ್ರವಚನ' ಕುರಿತು ಅಧ್ಯಯನಶೀಲ ಉಪನ್ಯಾಸ ನೀಡಲಿದ್ದಾರೆ.

ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಗೌರವ ಅಧ್ಯಕ್ಷರಾದ ಯಡಿಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು, ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮತ್ತು ಬಂಕಾಪುರ ಅರಳೆಲೆ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಸಾನಿಧ್ಯ ವಹಿಸಲಿದ್ದು, ನಾಡಿನ ಮಠಾಧೀಶರು, ರಾಜಕೀಯ ಧುರೀಣರು, ಸಮಾಜದ ಗಣ್ಯರು ಮತ್ತು ದಾನಿಗಳೂ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆಂದು ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಐತಿಹಾಸಿಕ ಪುಲಿಗೆರೆ ಸೋಮೇಶ್ವರ ದೇವಸ್ಥಾನಕ್ಕೆ ಹೊಸ ಮೆರುಗು

▸▸ ಮೊದಲನೇ ಪುಟದಿಂದ



ಉತ್ಸವ" ಆಚರಿಸುವ ಮೂಲಕ ದೇವಾಲಯದ ಶಿಲ್ಪಕಲೆ, ಸಾಂಸ್ಕೃತಿಕ, ಧಾರ್ಮಿಕ ಹಾಗೂ ಐತಿಹಾಸಿಕ ವೈಭವವನ್ನು ಮರುಕಳಿಸುವಂತೆ ಮಾಡಿದ್ದಾರೆ.

**ಉತ್ತರ ಪ್ರವೇಶ ದ್ವಾರ ನೆನೆಗುದಿಗೆ :** ದೇವಾಲಯಕ್ಕೆ ಪೂರ್ವ, ದಕ್ಷಿಣ ಮತ್ತು ಉತ್ತರಕ್ಕೆ ಮುಖ್ಯ ಪ್ರವೇಶ ದ್ವಾರಗಳಿದ್ದು, ಉತ್ತರದ ಪ್ರವೇಶ ದ್ವಾರ ಮಾತ್ರ ಜೀರ್ಣೋದ್ಧಾರಗೊಳ್ಳದೆ ಉಳಿದಿತ್ತು. ಈ ದ್ವಾರದಿಂದಲೇ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸಂಚರಿಸುತ್ತಿದ್ದರಿಂದ ಅಪಾಯದ ಸಾಧ್ಯತೆ ಇದ್ದು ದೇವಸ್ಥಾನದ ಸೌಂದರ್ಯಕ್ಕೂ ಧಕ್ಕೆಯಾಗಿತ್ತು. ಈ ಹಿನ್ನೆಲೆಯಲ್ಲಿ ಸ್ಥಳೀಯ ಭಕ್ತರು ಪ್ರವಾಸೋದ್ಯಮ ಇಲಾಖೆ ಸಚಿವರಾದ ಹೆಚ್.ಕೆ. ಪಾಟೀಲರಿಗೆ ಅನೇಕ ಬಾರಿ ಮನವಿ ಸಲ್ಲಿಸಿದ್ದರು. ಮನವಿಗೆ ಸ್ಪಂದಿಸಿದ ಸಚಿವರು 2.40 ಕೋಟಿ ಅನುದಾನ ಬಿಡುಗಡೆಗೊಳಿಸಿದ್ದಾರೆ.

### ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ

# ವಿದ್ಯಾರ್ಥಿಗಳು ದೇಶದ ಆಸ್ತಿಯಾಗಬೇಕು: ಎಸ್.ಆರ್. ರಿತ್ತಿ

**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಜಗತ್ತಿನಲ್ಲಿ ನಡೆಯುತ್ತಿರುವ ಯುದ್ಧಗಳಲ್ಲಿ ಬಳಸಲಾಗುತ್ತಿರುವ ಅನೇಕ ತಂತ್ರಜ್ಞಾನಗಳ ಮೂಲ ತತ್ವಗಳನ್ನು ಭಾರತೀಯ ವಿಜ್ಞಾನಿಗಳು ಬಹಳ ಹಿಂದೆಯೇ ಕಂಡುಹಿಡಿದಿದ್ದಾರೆ. ಭಾರತೀಯ ಜ್ಞಾನ ಪರಂಪರೆ ಮತ್ತು ಸಂಸ್ಕೃತಿಯಿಂದ ಬಂದ ವೈಜ್ಞಾನಿಕ ಆಲೋಚನೆಗಳಿಗೆ ಜಗತ್ತಿನಾದ್ಯಂತ ಮೆಚ್ಚುಗೆ ದೊರೆಯುತ್ತಿದೆ ಎಂದು ಮುಂಡರಗಿ ನಿವೃತ್ತ ಮುಖ್ಯೋಪಾಧ್ಯಾಯ ಎಸ್. ಆರ್. ರಿತ್ತಿ ಹೇಳಿದರು.

ಇಲ್ಲಿನ ಜನತಾ ವಿದ್ಯಾವರ್ಧಕ ಸಂಸ್ಥೆಯ ಬಿ.ಎಚ್. ಪಾಟೀಲ ಪ್ರೌಢಶಾಲೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಭಾರತೀಯರ ಸಂಸ್ಕೃತಿ ಮತ್ತು ಪರಂಪರೆಯಿಂದ ಬಂದ ಜ್ಞಾನದಿಂದ ಅನೇಕ ತಂತ್ರಜ್ಞಾನಗಳು ರೂಪುಗೊಂಡಿವೆ ಎಂದು ಹೇಳಿದರು. ಭಾರತೀಯ ಗಣಿತ ಹಾಗೂ ವೈಜ್ಞಾನಿಕ ಸೂತ್ರಗಳು ಜಗತ್ತಿಗೆ





ಮಾರ್ಗದರ್ಶನ ನೀಡುವಂತಿದ್ದರೂ, ಕೆಲ ಸಂದರ್ಭಗಳಲ್ಲಿ ವಿದೇಶಿಗಳು ಅವುಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿರುವುದು ವಿಷಾದನೀಯ ಎಂದು ಅವರು ಅಭಿಪ್ರಾಯಪಟ್ಟರು.

ವಿದ್ಯಾರ್ಥಿಗಳು ಶಿವ ಹಾಗೂ ಶರಣರ ತತ್ವಾದರ್ಶಗಳನ್ನು ಅಳವಡಿಸಿಕೊಂಡು ಶಿಕ್ಷಣ ಪಡೆದು ದೇಶದ ಆಸ್ತಿಯಾಗಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಈಶ್ವರಪ್ಪ ಕುಂಬಾರ ಮಾತನಾಡಿ, ಸರ್ಕಾರದ ಸೂಚನೆಯಂತೆ ವಿದ್ಯಾರ್ಥಿಗಳು ಮೊಬೈಲ್ ಬಳಕೆಯಿಂದ ದೂರವಿದ್ದು, ಪೋಷಕರ ಮಾತು ಕೇಳಿ ಶಿಕ್ಷಕರ ಮಾರ್ಗದರ್ಶನದಲ್ಲಿ ಪರೀಕ್ಷೆಗಳನ್ನು ಎದುರಿಸಬೇಕು ಎಂದು ಸಲಹೆ ನೀಡಿದರು. ಶಾಲೆಗೆ ಕೀರ್ತಿ ತರುವ ರೀತಿಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಬೇಕು ಎಂದು ಅವರು ಹೇಳಿದರು.

ಸಂಸ್ಥೆಯ ನಿರ್ದೇಶಕ ವೀರಯ್ಯ ಗಂಧದ ಮಾತನಾಡಿ, ಶಿಕ್ಷಣದ ಮಹತ್ವ ಇಂದಿನ ದಿನಗಳಲ್ಲಿ ಅಪಾರವಾಗಿದೆ ಎಂದು ಹೇಳಿದರು. ಈ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿದ ಅನೇಕ ವಿದ್ಯಾರ್ಥಿಗಳು ಇಂದು ಉನ್ನತ ಹುದ್ದೆಗಳನ್ನು ಅಲಂಕರಿಸಿ, ಯಶಸ್ವಿ ಉದ್ಯಮಗಳನ್ನು ಸ್ಥಾಪಿಸಿರುವುದು ಹೆಮ್ಮೆಯ ಸಂಗತಿ ಎಂದು ಅವರು ಹೇಳಿದರು. ವಿದ್ಯಾರ್ಥಿಗಳು ತಳಮಟ್ಟದ

> "ಭಾರತೀಯ ಗಣಿತ ಹಾಗೂ ವೈಜ್ಞಾನಿಕ ಸೂತ್ರಗಳು ಜಗತ್ತಿಗೆ ಮಾರ್ಗದರ್ಶನ ನೀಡುವಂತಿದ್ದರೂ, ಕೆಲ ಸಂದರ್ಭಗಳಲ್ಲಿ ವಿದೇಶಿಗಳು ಅವುಗಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿರುವುದು ವಿಷಾದನೀಯ"
> – **ಎಸ್.ಆರ್. ರಿತ್ತಿ,** ನಿವೃತ್ತ ಮುಖ್ಯೋಪಾಧ್ಯಾಯ.

> "ಸರ್ಕಾರದ ಸೂಚನೆಯಂತೆ ವಿದ್ಯಾರ್ಥಿಗಳು ಮೊಬೈಲ್ ಬಳಕೆಯಿಂದ ದೂರವಿದ್ದು, ಪೋಷಕರ ಮಾತು ಕೇಳಿ ಶಿಕ್ಷಕರ ಮಾರ್ಗದರ್ಶನದಲ್ಲಿ ಪರೀಕ್ಷೆಗಳನ್ನು ಎದುರಿಸಬೇಕು ಎಂದು ಸಲಹೆ ನೀಡಿದರು. ಶಾಲೆಗೆ ಕೀರ್ತಿ ತರುವ ರೀ"ತಿಯಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಬೇಕು ಎಂದು ಸಂಸ್ಥೆಯ ಅಧ್ಯಕ್ಷ ಈಶ್ವರಪ್ಪ ಕುಂಬಾರ ಹೇಳಿದರು"

ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಿ ಪ್ರತಿಭಾನ್ವಿತರಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಳೆದ ವರ್ಷ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಗಳಿಸಿದ ಪ್ರಕಾಶ ಪಾಪನಾಶಿ, ಲಕ್ಷ್ಮಣ ಒಂಟಿ, ಶಿವಯೋಗಿ ಹೊಟ್ಟಿ ಹಾಗೂ ಶಾಲೆಗೆ ನಿಧಿ ನೀಡಿದ ವಿದ್ಯಾರ್ಥಿ ಪ್ರಜ್ವಲ್ ರಿತ್ತಿ ಅವರನ್ನು ಸನ್ಮಾನಿಸಲಾಯಿತು.

ಪ್ರತಿ ವರ್ಷ ಹೆಚ್ಚಿನ ಅಂಕ ಗಳಿಸುವ ವಿದ್ಯಾರ್ಥಿಗಳಿಗೆ ವೀರಯ್ಯ ಗಂಧದ ಅವರು ರೂ.3,000 ನಗದು ಬಹುಮಾನ ನೀಡಿದರು. ಅಲ್ಲದೆ ವಿಷಯವಾರು ನೂರಕ್ಕೆ ನೂರು ಅಂಕ ಪಡೆದ ವಿದ್ಯಾರ್ಥಿಗಳಿಗೆ ಶಿಕ್ಷಕಿ ಎ.ಕೆ. ಹೊಸಮನಿ ತಲಾ ರೂ.1,000 ಬಹುಮಾನ ನೀಡಿ ಪ್ರೋತ್ಸಾಹಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕರಾದ ಕೊಟ್ರಗೌಡ ಪಾಟೀಲ, ಪ್ರಕಾಶ ತೋಫಿನ್, ಮಲ್ಲಪ್ಪ ಕಮತರ ಸೇರಿದಂತೆ ಇತರರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

### ಪಂಚಮಸಾಲಿ ಮಹಿಳಾ ಘಟಕದಿಂದ ಮಹಿಳಾ ದಿನಾಚರಣೆ ಸಮಾರಂಭದಲ್ಲಿ ಜಯಶ್ರೀ ಉಗಲಾಟ

# ಕಿತ್ತೂರು ಚೆನ್ನಮ್ಮಳ ಆದರ್ಶಗಳು ಮಹಿಳೆಯರಿಗೆ ಪ್ರೇರಣೆ



> "ಕಿತ್ತೂರು ಚೆನ್ನಮ್ಮಳ ಧೈರ್ಯ ಮತ್ತು ಆದರ್ಶಗಳು ಮಹಿಳೆಯರಿಗೆ ಪ್ರೇರಣೆಯಾಗಿವೆ. ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ಮುಂದೆ ಬರಬೇಕು."
> – **ಜಯಶ್ರೀ ಉಗಲಾಟ,** ಅಧ್ಯಕ್ಷೆ, ಗದಗ ಜಿಲ್ಲಾ ಪಂಚಮಸಾಲಿ ಮಹಿಳಾ ಘಟಕ

**ಮಹಿಳಾ ದಿನಾಚರಣೆ ಅಂಗವಾಗಿ ಸ್ಪರ್ಧೆಗಳು**

1) ಸಮಾಜದ ಮಹಿಳೆಯರಿಗಾಗಿ ವಿವಿಧ ಸ್ಪರ್ಧೆಗಳ ಆಯೋಜನೆ
2) ಶಿವಲೀಲಾ ವಿರಾಪೂರ, ಉಮಾ ಕರಮುಡಿ, ಮಂಜುಳಾ ಕರೋಸಿ ಸೇರಿದಂತೆ ಹಲವರು ವಿಜೇತರು
3) ವಿಜೇತರಿಗೆ ಬಹುಮಾನ ವಿತರಣೆ
4) ಮಹಿಳೆಯರ ಒಗ್ಗಟ್ಟು ಮತ್ತು ಆತ್ಮವಿಶ್ವಾಸಕ್ಕೆ ಪ್ರೋತ್ಸಾಹ

**■ ವಿಜಯಸಾಕ್ಷಿ ಸುದ್ದಿ, ಗದಗ**

ಬ್ರಿಟೀಷರ ಎದೆಗುಂಡಿಗೆಯನ್ನು ನಡುಗಿಸಿದ ವೀರರಾಣಿ ಕಿತ್ತೂರು ಚೆನ್ನಮ್ಮಳ ಆದರ್ಶಗಳೇ ಪಂಚಮಸಾಲಿ ಸಮಾಜಕ್ಕೆ ದಾರಿದೀಪವಾಗಿವೆ. ಮಹಿಳೆಯರು ಕುಟುಂಬ ನಿರ್ವಹಣೆಯೊಂದಿಗೆ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲೂ ಸದೃಢರಾಗಬೇಕು ಎಂದು ಗದಗ ಜಿಲ್ಲಾ ಪಂಚಮಸಾಲಿ ಮಹಿಳಾ ಘಟಕದ ಅಧ್ಯಕ್ಷೆ ಜಯಶ್ರೀ ಉಗಲಾಟ ಹೇಳಿದರು.

ಬುಧವಾರ ನಗರದ ಹಾಲಕೇರಿ ಶಾಖಾ ಮಠದ ಆವರಣದಲ್ಲಿ ಗದಗ ಜಿಲ್ಲಾ ಪಂಚಮಸಾಲಿ ಮಹಿಳಾ ಘಟಕದಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಂಚಮಸಾಲಿ ಸಮಾಜದಲ್ಲಿ ಅಪಾರ ಸಂಖ್ಯೆಯಲ್ಲಿರುವ ಮಹಿಳೆಯರು ಒಗ್ಗಟ್ಟಾಗಬೇಕು. ಮಹಿಳೆಯರ ಆರ್ಥಿಕ ಸದೃಢತೆಗೆ ಘಟಕದಿಂದ ಹಣಕಾಸಿನ ನೆರವು ನೀಡಲಾಗುತ್ತಿದ್ದು, ಎಲ್ಲರೂ ಸಹಕರಿಸಿದರೆ ಸಹಕಾರಿ ಬ್ಯಾಂಕ್ ಸ್ಥಾಪಿಸುವ ಉದ್ದೇಶವಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಡಾ. ಸ್ನೇಹಾ ಪಾಟೀಲ ಮಾತನಾಡಿ, ಇಂದಿನ ಒತ್ತಡದ ಜೀವನದಲ್ಲಿ ಮಹಿಳೆಯರು ತಮ್ಮ ಆರೋಗ್ಯವನ್ನು ನಿರ್ಲಕ್ಷಿಸುತ್ತಿದ್ದಾರೆ. ಬಿಪಿ, ಶುಗರ್ ಸಮಸ್ಯೆಗಳು ಹೆಚ್ಚುತ್ತಿರುವುದರಿಂದ ಸಮಯಕ್ಕೆ ಸರಿಯಾಗಿ ಊಟ, ವಿಶ್ರಾಂತಿ ಪಡೆಯುವುದು ಹಾಗೂ ಕಾಲಕಾಲಕ್ಕೆ ವೈದ್ಯರ ಸಲಹೆ ಪಡೆಯುವುದು ಅಗತ್ಯ ಎಂದು ಹೇಳಿದರು.

ಇನ್ನೋರ್ವ ಮುಖ್ಯ ಅತಿಥಿ ಡಾ. ಅಕ್ಷತಾ ಕವಳಿಕಾಯಿ ಮಾತನಾಡಿ, ಕಣ್ಣು ಮನುಷ್ಯನ ಪ್ರಮುಖ ಅಂಗವಾಗಿದ್ದು ಅದರ ಆರೈಕೆ ಅತ್ಯಂತ ಮುಖ್ಯ. ತಜ್ಞ ವೈದ್ಯರ ಸಲಹೆಯಂತೆ ಕನ್ನಡಕಗಳನ್ನು ಬಳಸಬೇಕು ಹಾಗೂ ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ಗದಗ ಅಕ್ಕನ ಬಳಗದ ಕಾರ್ಯದರ್ಶಿ ಜಯಶ್ರೀ ಪಾಟೀಲ, ಇಂದಿನ ತಾಂತ್ರಿಕ ಯುಗದಲ್ಲಿ ಮಕ್ಕಳು ಮೊಬೈಲ್ ಗೀಳಿಗೆ ಒಳಗಾಗುತ್ತಿರುವುದು ಆತಂಕಕಾರಿ. ಮನೆಯಲ್ಲಿಯೇ ಉತ್ತಮ ಸಂಸ್ಕಾರ, ಸಂಸ್ಕೃತಿ ಹಾಗೂ ಓದು ಬರಹದ ಕಡೆ ಮಕ್ಕಳ ಗಮನ ಸೆಳೆಯುವ ಹೊಣೆ ಮಹಿಳೆಯರ ಮೇಲಿದೆ ಎಂದು ಹೇಳಿದರು.

ನಗರಸಭಾ ಸದಸ್ಯೆ ವಿಜಯಲಕ್ಷ್ಮಿ ದಿಂಡೂರ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಮಹಿಳೆಯರು ಸಂಘಟನೆಯಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಕರೆ ನೀಡಿದರು. ಮಹಿಳಾ ದಿನಾಚರಣೆ ಅಂಗವಾಗಿ ಸಮಾಜದ ಮಹಿಳೆಯರಿಗಾಗಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ಶಿವಲೀಲಾ ವಿರಾಪೂರ, ಉಮಾ ಕರಮುಡಿ, ಮಂಜುಳಾ ಕರೋಸಿ, ನಿರ್ಮಲಾ ಮಟ್ಟಿ, ಜ್ಯೋತಿ ಬಾವಿಕಟ್ಟಿ, ಶಾಂತಾ ತುಪ್ಪದ, ಮಂಜುಳಾ ಪಾಟೀಲ, ಸುಶೀಲಾ ಸೊಡ್ಲಾಪೂರ ಸೇರಿದಂತೆ ಹಲವರು ವಿಜೇತರಾಗಿ ಬಹುಮಾನ ಪಡೆದರು. ರೇಣುಕಾ ಅಮಾತ್ಯ ಪ್ರಾರ್ಥಿಸಿದರು, ಶಿವಲೀಲಾ ಅಕ್ಕಿ ಸ್ವಾಗತಿಸಿದರು, ಶಾರದಾ ಬೊಮ್ಮಸಾಗರ ನಿರೂಪಿಸಿದರು ಹಾಗೂ ಶಾಂತಾ ಮುಂದಿನಮನಿ ವಂದಿಸಿದರು. ಕಾರ್ಯಕ್ರಮದಲ್ಲಿ ಕವಿತಾ ದಂಡಿನ, ಅನ್ನಪೂರ್ಣ ವರವಿ, ಸುಮಾ ಪಾಟೀಲ, ವಿದ್ಯಾ ಗಂಜಿಹಾಳ, ಶಶಿಕಲಾ ಮಾಲೀಪಾಟೀಲ, ಮಾಧುರಿ ಮಾಳೆಕೊಪ್ಪ, ನೀಲಾಂಬಿಕಾ ತೋಟದ, ರೂಪಾ ಅಡಗತ್ತಿ, ನಿರ್ಮಲಾ ಪಾಟೀಲ, ಸುಜಾತಾ ಗುಡಿಮನಿ, ಜ್ಯೋತಿ ದಾನಪ್ಪಗೌಡ್ರ, ಪುಷ್ಪಾ ವಾರದ, ದೀಪಾ ಮುನವಳ್ಳಿ, ಎಸ್. ಲೀಲಾವತಿ, ಕಮಲಾಕ್ಷೀ ತೆಕ್ಕಲಕೋಟಿ, ರಾಜೇಶ್ವರಿ ಉಮಚಗಿ, ನಾಗರತ್ನ ಬೆಂತೂರ, ಲಕ್ಷ್ಮೀ ಹಳ್ಳಿಕೇರಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

# ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯರಿಗೆ ಪೂಜ್ಯನೀಯ ಸ್ಥಾನವಿದೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಯರಿಗೆ ಪೂಜ್ಯನೀಯ ಸ್ಥಾನವಿದ್ದು, ಹಿಂದಿನ ಕಾಲದಿಂದಲೂ ಮಹಿಳೆಯರು ಗೌರವ ಸ್ಥಾನವನ್ನು ಪಡೆದಿದ್ದಾರೆ. ಅನುಭವ ಮಂಟಪದಲ್ಲಿ ಮಹಿಳೆಯರಿಗೆ ಸಮಾನತೆ ನೀಡುವ ಮೂಲಕ ಬಸವಣ್ಣನವರು ಮಹಿಳೆಯರು ಪುರುಷರಷ್ಟೇ ಸರಿಸಮಾನರು ಎಂದು ನಿರೂಪಿಸಿದರು ಎಂದು ಗದಗ ಜಿಲ್ಲಾ ಮಹಿಳಾ ಮತ್ತು ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಜಿ.ಪದ್ಮಾವತಿ ಹೇಳಿದರು.

ಗದಗಿನ ಅಕ್ಕನ ಬಳದಲ್ಲಿ ಅಕ್ಕನ ಬಳಗದಿಂದ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ಇಂದು ಹತ್ತಾರು ಕ್ಷೇತ್ರಗಳಲ್ಲಿ ಮಹಿಳೆಯರು ಸಾಧನೆಗೈಯುತ್ತಿರುವುದು ಹೆಮ್ಮೆಯ ಸಾಧನೆಯ ಮೆಟ್ಟಿಲುಗಳಾಗಿವೆ. ಮನೆಯನ್ನು ಬೆಳಗುವ ಜ್ಯೋತಿಯಾಗಿ ಇಡೀ ಕುಟುಂಬದ ನಿರ್ವಹಣೆಯನ್ನು ನಿಭಾಯಿಸಿ ತೊಟ್ಟಿಲು ತೂಗುವ ಕೈ ಜಗತ್ತನ್ನೇ ತೂಗಬಲ್ಲದು ಎಂಬುದನ್ನು ಮಹಿಳೆಯರು ನಿರೂಪಿಸಿದ್ದಾರೆ ಎಂದರು.

ಮಕ್ಕಳ ಬದುಕಲ್ಲಿ ಸಂಸ್ಕೃತಿ, ಸಂಸ್ಕಾರಗಳೆಂಬ ಅಮೃತ ಬೀಜಗಳನ್ನು ಬಿತ್ತಿ ಸದ್ಗುಣಗಳನ್ನು ಬೆಳೆಸಿದವಳು ತಾಯಿ. ಇಂತಹ ಮಹಿಳೆ ನಮ್ಮೆಲ್ಲರ ಬದುಕಿಗೆ ಮಾರ್ಗದರ್ಶಕರಾಗಿದ್ದಾರೆ. ಬದುಕಿನಲ್ಲಿ ಆರ್ಥಿಕ ಸದೃಢತೆಯನ್ನು ಸಾಧಿಸುವ ಮೂಲಕ ಸ್ವಾವಲಂಭಿಗಳಾಗಲು ಮಹಿಳಾ ಸಮುದಾಯ ಮುಂದೆ ಬರಬೇಕು ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅಕ್ಕನ ಬಳಗದ ಅಧ್ಯಕ್ಷೆ ಜಯಶ್ರೀ ಹುಬ್ಬಳ್ಳಿ, ಮಹಿಳೆಯರು ಮನಸ್ಸು ಮಾಡಿದರೆ ಎಲ್ಲವನ್ನೂ ಸಾಧಿಸಬಲ್ಲರು. ಕುಟುಂಬದಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ಅವರನ್ನು ಸತ್ಪ್ರಜೆಗಳನ್ನಾಗಿ ಮಾಡುವ ಮೊದಲ ಗುರು ಇವಳು. ಮಹಿಳಾ ಸಮುದಾಯಕ್ಕೆ ಸಾಧನೆಗಾಗಿ ಸಾಕಷ್ಟು ಅವಕಾಶಗಳಿದ್ದು ಅವುಗಳನ್ನು ಸದ್ವಿನಿಯೋಗ ಮಾಡಿಕೊಳ್ಳಬೇಕು ಎಂದರು.

ಅಕ್ಕನ ಬಳಗದಿಂದ ಜಿ.ಪದ್ಮಾವತಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಅಕ್ಕನ ಬಳಗದ ಟ್ರಸ್ಟಿ ಅಧ್ಯಕ್ಷೆ ಕಸ್ತೂರಿ ಹಿರೇಗೌಡರ ಸೇರಿದಂತೆ ಟ್ರಸ್ಟಿಗಳು, ಅಕ್ಕನ ಬಳಗದ ಪದಾಧಿಕಾರಿಗಳು, ಸದಸ್ಯೆಯರು ಪಾಲ್ಗೊಂಡಿದ್ದರು.

# ತಮಿಳುನಾಡು| ಪೊಲೀಸ್ ದೌರ್ಜನ್ಯದಿಂದ ಎರಡು ತಿಂಗಳಲ್ಲಿ ನಾಲ್ವರು ದಲಿತರು ಸಾವು

**■ ವಿಜಯಸಾಕ್ಷಿ ಸುದ್ದಿ, ಕೇರಳ**

ವಿಧಾನಸಭೆ ಚುನಾವಣೆ ಹೊಸ್ತಿಲಲ್ಲಿರುವ ತಮಿಳುನಾಡಿನಲ್ಲಿ ಕಾನೂನು ಸುವ್ಯವಸ್ಥೆ ಹದಗೆಡುತ್ತಿರುವುದನ್ನು ಪ್ರತಿಬಿಂಬಿಸುವ ಆತಂಕಕಾರಿ ವಿಚಾರವೊಂದು ಮುನ್ನಲೆಗೆ ಬಂದಿದ್ದು, ಪೊಲೀಸ್ ಹಿಂಸಾಚಾರದಿಂದಾಗಿ ಎರಡು ತಿಂಗಳ ಅವಧಿಯಲ್ಲಿ ನಾಲ್ವರು ದಲಿತರು ಸಾವನ್ನಪ್ಪಿದ್ದಾರೆ. ಈ ಸಾವುಗಳಲ್ಲಿ, ಎರಡು ಪ್ರಕರಣಗಳನ್ನು ಆತ್ಮಹತ್ಯೆ ಎಂದು ಹೇಳಲಾಗುತ್ತಿದ್ದು, ಬಲಿಪಶುಗಳಿಗೆ ಪೊಲೀಸ್ ಕಸ್ಟಡಿಯಲ್ಲಿ ಚಿತ್ರಹಿಂಸೆ ನೀಡಿದ ನಂತರ ಸಾವು ಸಂಭವಿಸಿದೆ ಎಂದು ಸಾಮಾಜಿಕ ಕಾರ್ಯಕರ್ತರು ಆರೋಪಿಸುತ್ತಿದ್ದಾರೆ ಎಂದು 'ದಿ ನ್ಯೂಸ್ ಮಿನಿಟ್' ವಿಶೇಷ ವರದಿ ಮಾಡಿದೆ.

ದಲಿತ ವ್ಯಕ್ತಿಗಳ ಕಸ್ಟಡಿ ಸಾವು ಸರಣಿಯಲ್ಲಿ ಇತ್ತೀಚಿನ ಪ್ರಕರಣವಾದ ಶಿವಗಂಗಾ ಜಿಲ್ಲೆಯ 26 ವರ್ಷದ ಆಕಾಶ್ ಡೆಲಿಸನ್ ಪೊಲೀಸ್ ಕಸ್ಟಡಿಯಲ್ಲಿ ಕ್ರೂರವಾಗಿ ಹಲ್ಲೆಗೊಳಗಾದ ನಂತರ ಸಾವನ್ನಪ್ಪಿದ್ದಾರೆ. ಅಂದಿನಿಂದ ಆತನ ಪೋಷಕರು ಶವ ಸ್ವೀಕರಿಸಲು ನಿರಾಕರಿಸಿದ್ದಾರೆ. ಕೃತ್ಯದಲ್ಲಿ ಭಾಗಿಯಾಗಿರುವ ಪೊಲೀಸ್ ಸಿಬ್ಬಂದಿ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿದ್ದಾರೆ.

ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದ ಈ ವ್ಯಕ್ತಿಗಳ ಸಾವು ಪ್ರತ್ಯೇಕ ಘಟನೆಗಳಲ್ಲ, ಬದಲಾಗಿ ಒಂದು ಗೊಂದಲದ ಮಾದರಿಯನ್ನು ಸೂಚಿಸುತ್ತವೆ ಎಂದು ಮಾನವ ಹಕ್ಕುಗಳ ಕಾರ್ಯಕರ್ತರು ವಾದಿಸುತ್ತಾರೆ. ಪೊಲೀಸ್ ವ್ಯವಸ್ಥೆಯೊಳಗಿನ ಜಾತಿ ಪೂರ್ವಾಗ್ರಹವು ದಲಿತರನ್ನು ಕಸ್ಟಡಿ ಹಿಂಸಾಚಾರಕ್ಕೆ ಗುರಿಯಾಗುವಂತೆ ಮಾಡುತ್ತಿದೆ ಎಂದು ಅವರು ಹೇಳುತ್ತಾರೆ. ಜನವರಿ ಮತ್ತು ಮಾರ್ಚ್ 2026 ರ ನಡುವೆ ತಂಜಾವೂರು, ಚೆಂಗಲ್ಪಟ್ಟು, ಅರಿಯಲೂರು ಮತ್ತು ಶಿವಗಂಗಾ ಜಿಲ್ಲೆಗಳಿಂದ ಸಾವುಗಳು ವರದಿಯಾಗಿವೆ. ಇದು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ವಿರುದ್ಧ ಆಕ್ರೋಶಕ್ಕೆ ಕಾರಣವಾಗಿದೆ. ಸ್ಟಾಲಿನ್ ಅವರು ಗೃಹ ಸಚಿವರ ಹುದ್ದೆಯನ್ನು ಹೊಂದಿದ್ದು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಗೆ ಜವಾಬ್ದಾರರಾಗಿದ್ದಾರೆ ಎಂಬುದನ್ನು ಗಮನಿಸಬೇಕು.

ತಂಜಾವೂರು ಆತ್ಮಹತ್ಯೆ ಪ್ರಕರಣ

ತಂಜಾವೂರು ಜಿಲ್ಲೆಯ ಆಡುತುರೈ ನಿವಾಸಿ ವಿಜಯಕುಮಾರ್ (31) ಫೆಬ್ರವರಿ 4 ರಂದು ಆತ್ಮಹತ್ಯೆಗೆ ಶರಣಾದರು. ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗಾಗಿ ಅವರನ್ನು ಜನವರಿ 14 ರಂದು ಕಪಿಸ್ಥಲಂ ಪೊಲೀಸ್ ಠಾಣೆಗೆ ಕರೆಸಲಾಗಿತ್ತು. ಸಾಮಾಜಿಕ ಕಾರ್ಯಕರ್ತರ ಪ್ರಕಾರ, ವಿಚಾರಣೆಯ ಸಮಯದಲ್ಲಿ ವಿಜಯಕುಮಾರ್ ಅವರನ್ನು ಥಳಿಸಿ ಕಸ್ಟಡಿಯಲ್ಲಿ ಚಿತ್ರಹಿಂಸೆ ನೀಡಲಾಗಿದೆ ಎಂದು ಆರೋಪಿಸಲಾಗಿದೆ. ನಂತರ ಅವರನ್ನು ಚಿಕಿತ್ಸೆಗಾಗಿ ತಂಜಾವೂರು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಯಿತು, ನಂತರ ಮನೆಗೆ ಕಳುಹಿಸಲಾಯಿತು.

# ನಾಳೆ ಪೂರ್ವಭಾವಿ ಸಭೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವೂ ದಿ.31-03-2026 ರಂದು ನಡೆಯಲಿರುವ ಭಗವಾನ ಮಹಾವೀರ ಜಯಂತಿ ಕಾರ್ಯಕ್ರಮದ ಅಂಗವಾಗಿ ಮಾರ್ಚ್ 13 ರಂದು ಶುಕ್ರವಾರ ಬೆಳಿಗ್ಗೆ 11.30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ.

ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಈ ಸಭೆಗೆ ಸಂಬಂಧಿತರು ಆಗಮಿಸಿ ಸಲಹೆ-ಅಭಿಪ್ರಾಯಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವರ ದಾಸಿಮಯ್ಯ ಜಯಂತಿ: ಪೂರ್ವಭಾವಿ ಸಭೆ ನಾಳೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿ ವರ್ಷದಂತೆ ಈ ವರ್ಷವೂ ದಿ.23.03.2026 ರಂದು ನಡೆಯಲಿರುವ ಆದ್ಯ ವಚನಕಾರ ಶ್ರೀ ದೇವರ ದಾಸಿಮಯ್ಯನವರ ಜಯಂತಿ ಕಾರ್ಯಕ್ರಮದ ನಿಮಿತ್ತ ಮಾರ್ಚ್ 13ರಂದು ಶುಕ್ರವಾರ ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಲಿದೆ.

ಸಭೆಗೆ ಸಂಬಂಧಿಸಿದವರು ಆಗಮಿಸಿ ಸಲಹೆ ಹಾಗೂ ಅಭಿಪ್ರಾಯಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ವ್ಹಿ. ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಿಲ ಸಿಲಿಂಡರ್ ದರ ಏರಿಕೆ ವಿರೋಧಿಸಿ ಇಂದು ಕಾಂಗ್ರೆಸ್ ಪ್ರತಿಭಟನೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಅನಿಲ (ಎಲ್‌ಪಿಜಿ) ಸಿಲಿಂಡರ್ ದರ ಏರಿಕೆಯನ್ನು ವಿರೋಧಿಸಿ ಕೇಂದ್ರ ಸರ್ಕಾರದ ವಿರುದ್ಧ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಮಾರ್ಚ್ 12ರಂದು ಸಂಜೆ 4ಕ್ಕೆ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರು ಹಾಗೂ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾಗಿರುವ ರೋಣ ಶಾಸಕ ಜಿ.ಎಸ್. ಪಾಟೀಲ ಅವರು ಪ್ರತಿಭಟನೆಯ ನೇತೃತ್ವ ವಹಿಸುವರು. ಈ ಸಂದರ್ಭದಲ್ಲಿ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಸೇರಿದಂತೆ ಹಲವು ಮುಖಂಡರು ಭಾಗವಹಿಸಲಿದ್ದಾರೆ.

ಪಕ್ಷದ ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಸೇರಿದಂತೆ ಜಿಲ್ಲಾ ಹಾಗೂ ಬ್ಲಾಕ್ ಕಾಂಗ್ರೆಸ್ ಪದಾಧಿಕಾರಿಗಳು, ವಿವಿಧ ಘಟಕಗಳ ಅಧ್ಯಕ್ಷರು ಮತ್ತು ಸದಸ್ಯರು, ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್, ಎಪಿಎಂಸಿ, ನಗರಸಭೆ, ಪಟ್ಟಣ ಪಂಚಾಯತ್, ಪುರಸಭೆಯ ಅಧ್ಯಕ್ಷರು ಮತ್ತು ಸದಸ್ಯರು ಈ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಹಾಗೆಯೇ ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತ, ವಿದ್ಯಾರ್ಥಿ ಕಾಂಗ್ರೆಸ್, ಸೇವಾದಳ ಸೇರಿದಂತೆ ವಿವಿಧ ವಿಭಾಗಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ, ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಡಾ. ದತ್ತಾತ್ರೇಯ ವೈಕುಂಠೆಗೆ ಯೋಗಶ್ರೀ ರಾಜ್ಯ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಸತತ 65 ಸಲ ರಕ್ತದಾನ ಮಾಡಿ, ಜಿಲ್ಲೆಯ ವಿವಿಧ ಭಾಗಗಳಲ್ಲಿ ಉಚಿತ ರಕ್ತತಪಾಸಣಾ ಶಿಬಿರಗಳನ್ನು ಆಯೋಜಿಸಿ ಸಾರ್ವಜನಿಕರಲ್ಲಿ ರಕ್ತದಾನದ ಮಹತ್ವವನ್ನು ಜಾಗೃತಿ ಮೂಡಿಸುತ್ತಿರುವ ಬೆಟಗೇರಿ ಮೂಲದ ರಕ್ತತಪಾಸಿಗ ಡಾ. ದತ್ತಾತ್ರೇಯ ವೈಕುಂಠೆ ಅವರನ್ನು ಕನ್ನಡಾಂಬೆ ರಕ್ಷಣಾ ವೇದಿಕೆ, ಧಾರವಾಡ ಜಿಲ್ಲಾ ಮತ್ತು ಕರ್ನಾಟಕದ ಪವರ್ ಆಫ್ ಯುಥ್ ಫೌಂಡೇಶನ್ ಸಂಯುಕ್ತವಾಗಿ ಯೋಗಶ್ರೀ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಿದೆ.

ಮಾರ್ಚ್ 10ರಂದು ಧಾರವಾಡದ ಆಲೂರ ವೆಂಕಟರಾವ್ ಭವನದಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ, ಧಾರವಾಡ ತಾಲ್ಲೂಕಿನ ಪರಮಪೂಜ್ಯ ಶ್ರೀ ಯೋಗಾನಂದ ಮಹಾಸ್ವಾಮಿಗಳ ನುಡಿನಮನ ಕಾರ್ಯಕ್ರಮದ ವೇಳೆ ಪ್ರಶಸ್ತಿಯನ್ನು ಡಾ. ವೈಕುಂಠೆಗೆ ವಿತರಿಸಲಾಯಿತು.

ಸಮಾರಂಭದಲ್ಲಿ ನಾಡಿನ ಪ್ರಮುಖ ಗಣ್ಯರು, ರಾಜಕೀಯ ನಾಯಕರು ಹಾಗೂ ಮಠಾಧೀಶರು ಭಾಗವಹಿಸಿ, ಡಾ. ವೈಕುಂಠೆ ಅವರ ಸೇವೆಗೆ ಅಭಿನಂದನೆ ಸಲ್ಲಿಸಿದರು.

ಸಾರ್ವಜನಿಕ ಸೇವೆ ಮತ್ತು ಆರೋಗ್ಯ ಕ್ಷೇತ್ರದಲ್ಲಿ ನೀಡಿದ ಉತ್ಕೃಷ್ಟ ಸೇವೆಗೆ ಈ ಗೌರವ ಬಹುಮುಖ್ಯವಾಗಿದೆ ಎಂದು ಸಂಘಟಕರು ಅಭಿಪ್ರಾಯಪಟ್ಟಿದ್ದಾರೆ.

**ಮಾ.18ರಿಂದ 105 ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ – ಬೇಸಿಗೆ ಹಿನ್ನೆಲೆ ನೀರು ಸೇರಿದಂತೆ ಮೂಲಭೂತ ಸೌಲಭ್ಯ ಒದಗಿಸಲು ಡಿಸಿ ಸ್ನೇಹಲ್ ಸೂಚನೆ**

# ಪರೀಕ್ಷೆ ವೇಳೆ ಮಕ್ಕಳಿಗೆ ಭಯಮುಕ್ತ ವಾತಾವರಣ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇವತ್ತಿನ ಮಕ್ಕಳು ತುಂಬಾ ಸೂಕ್ಷ್ಮರಾಗಿದ್ದು, ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಭಯಮುಕ್ತ ವಾತಾವರಣ ಕಲ್ಪಿಸಿ ಆತ್ಮಸ್ಥೈರ್ಯದಿಂದ ಪರೀಕ್ಷೆ ಬರೆಯಲು ಉತ್ತೇಜಿಸಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಹೇಳಿದರು.

ಮಾರ್ಚ್ 18ರಿಂದ ಧಾರವಾಡ ಜಿಲ್ಲೆಯ 7 ತಾಲೂಕುಗಳ 105 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆ ಕಾಲ ಪ್ರಾರಂಭವಾಗಿರುವುದರಿಂದ ಪರೀಕ್ಷಾ ಕೇಂದ್ರಗಳಲ್ಲಿ ನೀರು, ಶೌಚಾಲಯ, ಫ್ಯಾನ್ ಸೇರಿದಂತೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಸಮರ್ಪಕವಾಗಿ ಒದಗಿಸಬೇಕು ಎಂದು ಸೂಚಿಸಿದರು. ಕಳೆದ ಒಂದು ತಿಂಗಳಿನಲ್ಲಿ ಈ



ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲಾಗಿದ್ದು, ಮುಂದಿನ ಶೈಕ್ಷಣಿಕ ವರ್ಷದ ಯೋಜನೆ ರೂಪಿಸಿ ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಮಾತನಾಡಿ, ಕಳೆದ ಒಂದು ವರ್ಷದಿಂದ ಹಲವು ಶೈಕ್ಷಣಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಫಲಿತಾಂಶ ಹೆಚ್ಚಿಸುವುದರ ಜೊತೆಗೆ ಶಿಕ್ಷಣದ ಗುಣಮಟ್ಟ ಕಾಪಾಡುವುದು ಮುಖ್ಯವಾಗಿದೆ ಎಂದು ಹೇಳಿದರು. ಕಳೆದ ಸಾಲಿನಲ್ಲಿ ಆರು ಶಾಲೆಗಳು ಶೂನ್ಯ ಫಲಿತಾಂಶ ಪಡೆದಿದ್ದವು. ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಶಾಲೆಗೆ ಕಳುಹಿಸುವುದಿಲ್ಲ ಎಂಬ ಕಾರಣಗಳನ್ನು ನೀಡುವ ಬದಲು ಮಕ್ಕಳಿಗೆ ಧೈರ್ಯ ನೀಡಿ ಪ್ರೇರಣೆ ನೀಡಬೇಕು ಎಂದು ಹೇಳಿದರು.

ಪರೀಕ್ಷಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕ ನೀರಿನ ವ್ಯವಸ್ಥೆ ಮಾಡಬೇಕು. ಶಾಲೆಗಳ ಗ್ರೂಪ್–ಡಿ ನೌಕರರಿಂದ ನೀರು ಪೂರೈಕೆ ಮಾಡುವ ವ್ಯವಸ್ಥೆ ಕಲ್ಪಿಸಬೇಕು. ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದ್ದು, ಇಂಟರ್‌ನೆಟ್ ಸಂಪರ್ಕ ಸಜ್ಜಾಗಿರಬೇಕು. ಇಂಟರ್‌ನೆಟ್ ವ್ಯತ್ಯಯ ಉಂಟಾದಲ್ಲಿ ಡಾಂಗಲ್ ವ್ಯವಸ್ಥೆ ಇರಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಯೋಜನಾ ಉಪಸಮನ್ವಯಾಧಿಕಾರಿ ಎಸ್.ಎಂ. ಹುಡೇದಮನಿ ಅವರು ಎಸ್‌ಎಸ್‌ಎಲ್‌ಸಿ ಪರೀಕ್ಷಾ ಮಂಡಳಿಯಿಂದ ನೀಡಲಾದ ಸೂಚನೆಗಳನ್ನು ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರಿಗೆ ವಿವರಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಎಸ್.ಎನ್. ಹೊನ್ನಕೇರಿ, ಜಿಲ್ಲಾ ಉಪಖಜಾನಾಧಿಕಾರಿ ಪ್ರಕಾಶ ಹಳಪೇಟ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ರೇ, ಸಹಾಯಕ ಪೊಲೀಸ್ ಆಯುಕ್ತ ಸೋಮನಗೌಡ, ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆಯ ಪ್ರಾಚಾರ್ಯ ಬಸವರಾಜ ನಾಲತ್ವಾಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಭಯಮುಕ್ತಿ ಪರೀಕ್ಷಾ ಕೇಂದ್ರ ಈ ವರ್ಷದ ಧ್ಯೇಯ**

ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಮಾತನಾಡಿ, ಈ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ "ಭಯಮುಕ್ತ ಪರೀಕ್ಷೆ – ಭಯಮುಕ್ತಿ ಪರೀಕ್ಷಾ ಕೇಂದ್ರ" ಎಂಬ ಧ್ಯೇಯವನ್ನು ಹೊಂದಲಾಗಿದೆ. ಎಲ್‌ಬಿಎ ಮೂಲಕ ಶಿಕ್ಷಕರಿಗೆ ತರಬೇತಿ ನೀಡಲಾಗಿದೆ. ಜಿಲ್ಲೆಯನ್ನು ಶಿಕ್ಷಣ ಕ್ಷೇತ್ರದಲ್ಲಿ ಅಭಿವೃದ್ಧಿಪಡಿಸುವ ಅವಕಾಶವಿದ್ದು, ಈ ವರ್ಷ ಜಿಲ್ಲೆ ರಾಜ್ಯದಲ್ಲಿ ಉತ್ತಮ ಸ್ಥಾನ ಪಡೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

"ಇವತ್ತಿನ ಮಕ್ಕಳು ತುಂಬಾ ಸೂಕ್ಷ್ಮರಾಗಿದ್ದಾರೆ. ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಭಯಮುಕ್ತ ವಾತಾವರಣ ಕಲ್ಪಿಸಿ ಆತ್ಮಸ್ಥೈರ್ಯದಿಂದ ಪರೀಕ್ಷೆ ಬರೆಯಲು ಉತ್ತೇಜಿಸಬೇಕು."

– ಜಿಲ್ಲಾಧಿಕಾರಿ ಸ್ನೇಹಲ್

## ವಚನ ಕಲ್ಯಾಣ' 9 ಗಂಟೆಗಳ ನಾಟಕಕ್ಕೆ ಕಲಾವಿದರ ಆಯ್ಕೆ – ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ 'ವಚನ ಕಲ್ಯಾಣ' ಎಂಬ ಅಹೋರಾತ್ರಿ (ಒಂಬತ್ತು ಗಂಟೆಗಳ) ನಾಟಕವನ್ನು ಸಿದ್ಧಪಡಿಸಿ ರಾಜ್ಯಾದ್ಯಂತ ಪ್ರದರ್ಶಿಸಲು ಯೋಜಿಸಲಾಗಿದೆ.

ಇದರಿಗಾಗಿ ನುರಿತ ಹಾಗೂ ಆಸಕ್ತ ಯುವಕ–ಯುವತಿಯರು ಮತ್ತು ಅನುಭವಿ ರಂಗಕಲಾವಿದರು ಹಾಗೂ ಗಾಯಕರುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿದಾರರ ವಯೋಮಿತಿ 18 ರಿಂದ 40 ವರ್ಷ ಗಳೊಳಗಿರಬೇಕು. ರಂಗಶಿಕ್ಷಣದಲ್ಲಿ ತರಬೇತಿ ಪಡೆದಿರುವ ಹಾಗೂ ನಾಟಕಗಳಲ್ಲಿ ಅಭಿನಯಿಸಿರುವ ಕಲಾವಿದರಿಗೆ ಆದ್ಯತೆ ನೀಡಲಾಗುವುದು.

ತುಂಬಿದ ಅರ್ಜಿಗಳನ್ನು ಮಾರ್ಚ್ 20ರೊಳಗೆ ಸದಸ್ಯ ಕಾರ್ಯದರ್ಶಿ, ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ, ಕಲಾಗ್ರಾಮ, ಮಲ್ಲತ್ತಹಳ್ಳಿ, ಬೆಂಗಳೂರು–560056 ಇವರಿಗೆ ಮುದ್ದಾಂ ಅಥವಾ ಅಂಚೆ ಮೂಲಕ ಕಳುಹಿಸಬಹುದು. ಹಾಗೆಯೇ kanakare-searchcentre@gmail.com ಇ–ಮೇಲ್ ಮೂಲಕವೂ ಸಲ್ಲಿಸಬಹುದು.

ಆಯ್ಕೆಯಾದ ಅಭ್ಯರ್ಥಿಗಳು ಮೂರು ತಿಂಗಳ ಕಾಲ ಪೂರ್ಣಕಾಲಿಕವಾಗಿ ತರಬೇತಿ ಮತ್ತು ಪ್ರದರ್ಶನಗಳಲ್ಲಿ ಪಾಲ್ಗೊಳ್ಳುವುದು ಕಡ್ಡಾಯ. ಈ ಅವಧಿಯಲ್ಲಿ ಮಾಸಿಕ ಗೌರವಧನದ ಜೊತೆಗೆ ಊಟ ಹಾಗೂ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು.

ಅರ್ಜಿಯ ನಮೂನೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವೆಬ್‌ಸೈಟ್ kannadasiri.karnataka.gov.in ನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ನಾಟಕದ ನಿರ್ದೇಶಕ ಶ್ರೀ ಸಿ. ಬಸವಲಿಂಗಯ್ಯ (ಮೊ. 94485 38620) ಅವರನ್ನು ಸಂಪರ್ಕಿಸಬಹುದು. ಸಂದರ್ಶನಕ್ಕೆ ಹಾಜರಾಗುವ ಕಲಾವಿದರಿಗೆ ಯಾವುದೇ ಭತ್ಯೆ ನೀಡಲಾಗುವುದಿಲ್ಲ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.24ರಿಂದ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ


ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ "Exploring Nature's Pharmacy: Potentials of Medicinal and Aromatic Plants for Health, Livelihoods, Bio-economy and Conservation" ವಿಷಯದ ಕುರಿತು ಮಾರ್ಚ್ 24ರಿಂದ 26ರವರೆಗೆ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ.

ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು ಹಾಗೂ ಯುವ ಉದ್ಯಮಿಗಳು ಭಾಗವಹಿಸಬಹುದು. ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ತಮ್ಮ ಸಂಶೋಧನಾ ಪ್ರಬಂಧಗಳನ್ನು ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ಪ್ರಬಂಧಗಳಿಗೆ ನಗದು ಬಹುಮಾನ ನೀಡಲಾಗುತ್ತದೆ.

ಆಸಕ್ತರು ಮಾರ್ಚ್ 30ರೊಳಗೆ ನೀಡಿರುವ ರಿಜಿಸ್ಟ್ರೇಷನ್ ಲಿಂಕ್ ಮೂಲಕ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊ. 9620276781 ಮತ್ತು 9743084194 ಅನ್ನು ಸಂಪರ್ಕಿಸಬಹುದು ಅಥವಾ ಅಕಾಡೆಮಿಯ ವೆಬ್‌ಸೈಟ್ https://kstacademy.in ವೀಕ್ಷಿಸಬಹುದು.

## ಸಂಘಟನೆ ಬಲಿಷ್ಠವಾಗಬೇಕಾದರೆ ಬೂತ್ ಮಟ್ಟದಲ್ಲಿ ಕಾರ್ಯಕರ್ತರು ಕಾರ್ಯನಿರ್ವಹಿಸಬೇಕು



■ವಿಜಯಸಾಕ್ಷಿ ಸುದ್ದಿ, ಗದಗ

ನಾವು ಎಲ್ಲರೂ ಬಿಜೆಪಿ ಪಕ್ಷದ ಪದಾಧಿಕಾರಿಗಳಾಗಿರುವುದು ಭಾಗ್ಯಕರ ಸಂಗತಿ. ಪಕ್ಷದ ಬಲವರ್ಧನೆಗಾಗಿ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕು ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಎಂದು ಕರೆ ನೀಡಿದರು.

ಭಾರತೀಯ ಜನತಾ ಪಾರ್ಟಿ ಗದಗ ವಿಧಾನಸಭಾ ಕ್ಷೇತ್ರದ ಗದಗ ಗ್ರಾಮೀಣ ಮಂಡಲದ ಸಂಘಟನಾ ಸಭೆ ನಗರದಲ್ಲಿ ನಡೆಯಿತು. ಸಭೆಯಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಪಕ್ಷದ ಸಂಘಟನೆ ಬಲಿಷ್ಠವಾಗಬೇಕಾದರೆ ಬೂತ್ ಮಟ್ಟದಲ್ಲಿ ಕಾರ್ಯಕರ್ತರು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕರ್ತರ ಸಂಘಟನೆ ಹಾಗೂ ಪಕ್ಷದ ಕಾರ್ಯಕ್ರಮಗಳನ್ನು ಜನರಿಗೆ ತಲುಪಿಸುವ ಬಗ್ಗೆ ಅವರು ವಿವರಿಸಿದರು.

ಈ ಸಂದರ್ಭದಲ್ಲಿ ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಮಂಜುನಾಥ ಹಳ್ಳೂರಮಠ, ಸುಭಾಸ್ ಸುಂಕದ, ಹಿರಿಯ ಮುಖಂಡ ಬಿ.ಎಸ್. ಚಿಂಚಲಿ, ಜಿಲ್ಲಾ ಉಪಾಧ್ಯಕ್ಷರಾದ ನಿಂಗಪ್ಪ ಹುಗ್ಗಿ, ಅಶೋಕ ಕರೂರ, ಪ್ರಮುಖರಾದ ವೈ.ಪಿ. ಅಡ್ನೂರ, ವೆಂಕಟೇಶ ಕೋಣಿ, ರಾಜು ಕುಲಕರ್ಣಿ, ರೇಖಾ ಮದ್ನೂರ, ನಾಗರಾಜ ಮದ್ನೂರ, ಸಿದ್ದಪ್ಪ ಈರಗಾರ, ಹನುಮಂತಪ್ಪ ದಿಂಡೆಣ್ಣವರ, ಡಿ.ಬಿ. ಕರೀಗೌಡ್ರ, ಅಪ್ಪು ನಮಸ್ತೆಮಠ, ಲಕ್ಷ್ಮಣ ರಣತೂರ, ಅರವಿಂದ ಅಣ್ಣಿಗೇರಿ, ನಾರಾಯಣ ಘೋಡ್ಕೆ, ಅಲ್ಲಾಸಾಬ್ ಪಿರಕಾನವರ, ಗೋಪಾಲ ನಾಯಕ್, ಸಿದ್ಲಿಂಗಪ್ಪ ಬೆಂತೂರ, ಮಲ್ಲೇರಪ್ಪ ಬೆಂತೂರ, ಮೋಹನ ಕೋರಿ, ಶ್ರೀಕಾಂತ ಹೊಸಮನಿ, ಪ್ರಕಾಶ ದೊಡ್ಡಮನಿ, ಲಕ್ಷ್ಮಣ ಕಟಗಿ, ಪರಶುರಾಮ ಬಡಿಗೇರ ಸೇರಿದಂತೆ ಅನೇಕ ಪ್ರಮುಖರು ಉಪಸ್ಥಿತರಿದ್ದರು.

**ಏಪ್ರಿಲ್‌ನಿಂದ ಮೊದಲ ಹಂತ ಆರಂಭ–ಮನೆಗಳ ಪಟ್ಟಿ ಮತ್ತು ವಸತಿ ಗಣತಿ ಸೆಪ್ಟೆಂಬರ್ ವರೆಗೆ । ಆ್ಯಪ್ ಮೂಲಕ ಸಂಪೂರ್ಣ ಗಣತಿ ಕಾರ್ಯ।**

# ರಾಜ್ಯದಲ್ಲೇ ಮೊದಲ ಡಿಜಿಟಲ್ ಜನಗಣತಿಗೆ ಗದಗ ಜಿಲ್ಲೆಯಲ್ಲಿ ಸಿದ್ಧತೆ!



■ವಿಜಯಸಾಕ್ಷಿ ಸುದ್ದಿ, ಗದಗ

ದೇಶದಲ್ಲೇ ಮೊದಲ ಬಾರಿಗೆ ಕರ್ನಾಟಕದಲ್ಲಿ 2026ರ ಡಿಜಿಟಲ್ ಜನಗಣತಿ ಕಾರ್ಯ ಆರಂಭವಾಗಲಿದ್ದು, ಈ ಮಹತ್ವದ ಕಾರ್ಯಕ್ಕೆ ಜಿಲ್ಲಾಡಳಿತ ಸಂಪೂರ್ಣ ಸಜ್ಜಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ನಡೆದ ಜನಗಣತಿ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಬಾರಿ ಸಂಪೂರ್ಣವಾಗಿ ಡಿಜಿಟಲ್ ಮಾದರಿಯಲ್ಲಿ ಆ್ಯಪ್ ಮೂಲಕ ಗಣತಿ ನಡೆಯಲಿದೆ ಎಂದು ತಿಳಿಸಿದರು. ಈ ಕಾರ್ಯಕ್ಕಾಗಿ ಜಿಲ್ಲೆಯಾದ್ಯಂತ ಅಧಿಕಾರಿಗಳ ತಂಡ ರಚನೆ ಹಾಗೂ ತರಬೇತಿ ಪ್ರಕ್ರಿಯೆಗಳು ಭರದಿಂದ ಸಾಗುತ್ತಿವೆ ಎಂದರು.

ಜನಗಣತಿಯು ಎರಡು ಹಂತಗಳಲ್ಲಿ ನಡೆಯಲಿದ್ದು, ಮೊದಲ ಹಂತದಲ್ಲಿ 2026ರ ಎಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ ಮನೆಗಳ ಪಟ್ಟಿ ಮತ್ತು ವಸತಿ ಗಣತಿ ನಡೆಯಲಿದೆ. ಎರಡನೇ ಹಂತದಲ್ಲಿ 2027ರಲ್ಲಿ ಜನಸಂಖ್ಯಾ ಗಣತಿ ನಡೆಯಲಿದೆ ಎಂದು ತಿಳಿಸಿದರು.

ಈ ಬಾರಿ ಜನಗಣತಿಯ ವಿಶೇಷತೆಯೆಂದರೆ, ಸಾರ್ವಜನಿಕರೇ ಸ್ವಯಂ ಪೋರ್ಟಲ್ ಮೂಲಕ ತಮ್ಮ ಮಾಹಿತಿಯನ್ನು ದಾಖಲಿಸಲು ಅವಕಾಶ ನೀಡಲಾಗಿದೆ. ಎಪ್ರಿಲ್ 1 ರಿಂದ 15ರವರೆಗೆ ಈ ಸೌಲಭ್ಯ ಲಭ್ಯವಿರುತ್ತದೆ. ಎಪ್ರಿಲ್ 16 ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿ ಮಾಹಿತಿಯನ್ನು ಪರಿಶೀಲಿಸಿ, ಉಳಿದ ಮಾಹಿತಿಯನ್ನು ಆ್ಯಪ್ ಮೂಲಕ ಸಂಗ್ರಹಿಸಲಿದ್ದಾರೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳು ಪ್ರಧಾನ ಜಿಲ್ಲಾ ಗಣತಿ ಅಧಿಕಾರಿಗಳಾಗಿದ್ದು, ಅಪರ ಜಿಲ್ಲಾಧಿಕಾರಿಗಳು ಜಿಲ್ಲಾ ಗಣತಿ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ಉಪವಿಭಾಗ ಮಟ್ಟದಲ್ಲಿ ಉಪವಿಭಾಗಾಧಿಕಾರಿಗಳು ಉಪವಿಭಾಗೀಯ ಗಣತಿ ಅಧಿಕಾರಿಗಳಾಗಿದ್ದು, ತಾಲೂಕು ಮಟ್ಟದಲ್ಲಿ ತಹಶೀಲ್ದಾರ್‌ಗಳು ಚಾರ್ಜ್ ಅಧಿಕಾರಿಗಳಾಗಿ ನೇಮಕಗೊಂಡಿದ್ದಾರೆ.

ಜಿಲ್ಲೆಯಲ್ಲಿ ಒಟ್ಟು 335 ಗ್ರಾಮೀಣ ಪ್ರದೇಶಗಳು ಹಾಗೂ ನಗರ ಪ್ರದೇಶಗಳಲ್ಲಿ 209 ವಾರ್ಡ್‌ಗಳನ್ನು ಗಣತಿಗಾಗಿ ಗುರುತಿಸಲಾಗಿದ್ದು, ಗಣತಿ–ದಾರರು ಮತ್ತು ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ. ಪ್ರತಿಯೊಂದು ತಾಲೂಕಿಗೂ ಒಬ್ಬರಂತೆ ಒಟ್ಟು 7 ಕನ್ಸಲ್ಟೆಂಟ್‌ಗಳನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ಮಾತನಾಡಿ, ಈ ಗಣತಿ ಸಂಪೂರ್ಣ ಆ್ಯಪ್ ಆಧಾರಿತವಾಗಿರುವುದರಿಂದ ತಾಂತ್ರಿಕ ನಿರ್ವಹಣೆಗೆ 19 ಐಟಿ ಸಿಬ್ಬಂದಿಯನ್ನು ನೇಮಿಸಿ ಅವರಿಗೆ ತರಬೇತಿ ನೀಡಲಾಗಿದೆ ಎಂದು ಹೇಳಿದರು.

ಮಾಸ್ಟರ್ ಟ್ರೈನರ್‌ಗಳಾದ ಕಲ್ಲೂರು ಹಾಗೂ ಗಿರೀಶ್ ತಿಮ್ಮಪ್ಪ ಅವರು ಮುಂದಿನ ದಿನಗಳಲ್ಲಿ ತಾಲೂಕು ಹಾಗೂ ನಗರ ಮಟ್ಟದಲ್ಲಿ ಗಣತಿದಾರರು ಮತ್ತು ಮೇಲ್ವಿಚಾರಕರಿಗೆ ತರಬೇತಿ ನೀಡಲಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಉಪ ವಿಭಾಗಾಧಿಕಾರಿ ಗಂಗಪ್ಪ ಎಂ., ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರು, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ಡಿಎಸ್ ಅಧಿಕಾರಿ ಬಸವರಾಜ ಪಾಟೀಲ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

"2026ರ ಜನಗಣತಿ ಸಂಪೂರ್ಣ ಡಿಜಿಟಲ್ ಮಾದರಿಯಲ್ಲಿ ನಡೆಯಲಿದ್ದು, ಜಿಲ್ಲೆಯಲ್ಲಿ ಎಲ್ಲಾ ಅಧಿಕಾರಿಗಳು ಸಮರ್ಪಕವಾಗಿ ತರಬೇತಿ ಪಡೆದು ನಿಖರವಾದ ಮಾಹಿತಿಯನ್ನು ಸಂಗ್ರಹಿಸಲು ಮುಂದಾಗಬೇಕು."

– ಡಾ. ದುರಗೇಶ್ ಕೆ.ಆರ್. ಅಪರ ಜಿಲ್ಲಾಧಿಕಾರಿ.

**2026 ಜನಗಣತಿ ಮುಖ್ಯಾಂಶಗಳು**

1) ಮೊದಲ ಹಂತ: 2026 ಎಪ್ರಿಲ್ – ಸೆಪ್ಟೆಂಬರ್ : ಮನೆಗಳ ಪಟ್ಟಿ ಮತ್ತು ವಸತಿ ಗಣತಿ
2) ಎರಡನೇ ಹಂತ: 2027ರಲ್ಲಿ ಜನಸಂಖ್ಯಾ ಗಣತಿ
3) ಎಪ್ರಿಲ್ 1–15 : ಸಾರ್ವಜನಿಕರಿಗೆ ಸ್ವಯಂ ಪೋರ್ಟಲ್ ಮೂಲಕ ಮಾಹಿತಿ ದಾಖಲಿಸಲು ಅವಕಾಶ
3) ಎಪ್ರಿಲ್ 16ರಿಂದ ಗಣತಿದಾರರಿಂದ ಮನೆ–ಮನೆಗೆ ಭೇಟಿ
4) ಸಂಪೂರ್ಣ ಆ್ಯಪ್ ಆಧಾರಿತ ಡಿಜಿಟಲ್ ಗಣತಿ ವ್ಯವಸ್ಥೆ
5) ಜಿಲ್ಲೆಯಾದ್ಯಂತ 335 ಗ್ರಾಮೀಣ ಪ್ರದೇಶಗಳು, 209 ನಗರ ವಾರ್ಡ್‌ಗಳು ಗುರುತು
6) ತಾಂತ್ರಿಕ ಸಹಾಯಕ್ಕಾಗಿ 19 ಐಟಿ ಸಿಬ್ಬಂದಿ ನೇಮಕ

## ವಿಜ್ಞಾನವೇ ನವೋದ್ಯಮಗಳ ನೆಲೆಗಟ್ಟು: ಡಾ. ಎಚ್.ವೈ. ಮೇಟಿ



■ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ವಿಜ್ಞಾನವು ಮಾನವ ಜೀವನವನ್ನು ಸುಧಾರಿಸುವ ಶಕ್ತಿಯಾಗಿದ್ದು, ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವವನ್ನು ಬೆಳೆಸಿಕೊಂಡು ಹೊಸ ಆವಿಷ್ಕಾರಗಳತ್ತ ಗಮನ ಹರಿಸಬೇಕು ಎಂದು ಗದಗಿನ ನಿವೃತ್ತ ರಸಾಯನಶಾಸ್ತ್ರ ಪ್ರಾಧ್ಯಾಪಕ ಡಾ. ಎಚ್.ವೈ. ಮೇಟಿ ಹೇಳಿದರು.

ಇಲ್ಲಿನ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ವಿಜ್ಞಾನ ವಿಭಾಗವು ಐಕ್ಯುಎಸಿ ಅಡಿಯಲ್ಲಿ ಆಯೋಜಿಸಿದ್ದ 'ರಾಷ್ಟ್ರೀಯ ವಿಜ್ಞಾನ ದಿನಾಚರಣೆ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ವಿಜ್ಞಾನ ಶಿಕ್ಷಣವು ಸಮಾಜದಲ್ಲಿ ಜ್ಞಾನದ ಬೆಳಕನ್ನು ಹರಡುವುದರೊಂದಿಗೆ ಅಂಧಶ್ರದ್ಧೆಗಳನ್ನು ದೂರ ಮಾಡುವಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಸಂಶೋಧನಾ ಮನೋಭಾವ ಬೆಳೆಸಿ ನವೀನ ಆವಿಷ್ಕಾರಗಳತ್ತ ಮುಂದಾಗಬೇಕು ಎಂದು ಸಲಹೆ ನೀಡಿದರು.

ಭೌತಶಾಸ್ತ್ರ ಪ್ರಾಧ್ಯಾಪಕ ಹಾಗೂ ಐಕ್ಯುಎಸಿ ಸಂಚಾಲಕ ಡಾ. ಜಿತೇಂದ್ರ ಜಾಗೀರದಾರ ಮಾತನಾಡಿ, ವಿಜ್ಞಾನವು ಕೇವಲ ಪಠ್ಯಪುಸ್ತಕಗಳಿಗೆ ಸೀಮಿತವಾಗದೆ ದೈನಂದಿನ ಜೀವನದಲ್ಲೂ ಉಪಯೋಗವಾಗುವಂತಾಗಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಗಣಿತಶಾಸ್ತ್ರ ಪ್ರಾಧ್ಯಾಪಕ ಬಸವರಾಜ ಬಳಗಾನೂರಮಠ, ಐಕ್ಯುಎಸಿ ಸಹಸಂಚಾಲಕ ಡಾ. ಮಂಜುನಾಥ ತ್ಯಾಲಗಡಿ, ಇಂಗ್ಲಿಷ್ ಪ್ರಾಧ್ಯಾಪಕಿ ಸಾವಿತ್ರಿ ಟಿ., ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಲಕ್ಷ್ಮಣ ಮುಳಗುಂದ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲೆ ಡಾ. ಸುಧಾ ಕೌಜಗೇರಿ ಮಾತನಾಡಿ, ವಿಜ್ಞಾನವು ಮಾನವ ಜೀವನದ ಪ್ರತಿಯೊಂದು ಕ್ಷೇತ್ರದಲ್ಲಿಯೂ ಮಹತ್ವದ ಪಾತ್ರ ವಹಿಸುತ್ತಿದ್ದು, ವಿದ್ಯಾರ್ಥಿಗಳು ಪ್ರಶ್ನಿಸುವ ಮನೋಭಾವ ಬೆಳೆಸಿ ಹೊಸ ವಿಚಾರಗಳನ್ನು ಅನ್ವೇಷಿಸಲು ಮುಂದಾಗಬೇಕು ಎಂದು ಹೇಳಿದರು.

ಫೆಬ್ರವರಿ 2026ರಲ್ಲಿ ನಿವೃತ್ತರಾದ ರಸಾಯನಶಾಸ್ತ್ರ ಪ್ರಾಧ್ಯಾಪಕ ಡಾ. ಉಲ್ಲಾಸ ಶೆಟ್ಟಿ ದಂಪತಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಗಣಿತಶಾಸ್ತ್ರ ಪ್ರಾಧ್ಯಾಪಕಿ ಡಾ. ಸಾರಿಕಾ ಪಾಟೀಲ ವಂದನಾರ್ಪಣೆ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka